ಜನಮನದ ದನಿ

# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ



ಕೃಷ್ಣ ಜನ್ಮಾಷ್ಟಮಿಯ ಅಂಗವಾಗಿ ಮಕ್ಕಳು ಬಾಲಕೃಷ್ಣನ ವೇಷ ಧರಿಸಿ ಸಂಭ್ರಮಿಸಿದ ಕ್ಷಣ...

05 ಸೆಪ್ಟೆಂಬರ್, 2026 ಶನಿವಾರ ಬೆಲೆ ₹ 2.00 ಸಂಪುಟ : 20 ಸಂಚಿಕೆ -174 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629




ಶಿಕ್ಷಕ ಸಮೂಹದ ಚಿರ ಧ್ರುವತಾರೆ : ಡಾ.ಎಸ್.ರಾಧಾಕೃಷ್ಣನ್ » 2



ಗಣೇಶೋತ್ಸವಕ್ಕೆ ಷರತ್ತು : ರಾತ್ರಿ 8 ರೊಳಗೆ ವಿಸರ್ಜನೆ ಕಡ್ಡಾಯ » 3



ಜನ ಸೇವೆಯೇ ದೈವತ್ವದ ಪ್ರತೀಕ : ಸೋಮಶೇಖರ ಶ್ರೀ » 4

# ಸಾಲಮನ್ನಾ: ದೆಹಲಿಗೆ ಸರ್ವಪಕ್ಷ ನಿಯೋಗ

■ ಬರ ಪರಿಹಾರಕ್ಕೆ ಬಿಜೆಪಿ ನಾಯಕರು ಕೇಂದ್ರ ಸರ್ಕಾರ ಒತ್ತಾಯಿಸಲಿ: ಡಿ.ಕೆ.ಶಿವಕುಮಾರ್

• ಪ್ರಜೋದಯ ವರದಿ

ಬೆಂಗಳೂರು: ರೈತರ ಸಾಲ ಮನ್ನಾ ಮಾಡಲು ನೆರವು ಕೋರಿ ದೆಹಲಿಗೆ ಸರ್ವಪಕ್ಷ ನಿಯೋಗ ಕರೆದೊಯ್ಯಲಾಗು ವುದೆಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬರಗಾಲವೆಂದು ಪ್ರಧಾನಮಂತ್ರಿಯೇ ಹೇಳಿದ್ದು, ಕೇಂದ್ರ ಸರ್ಕಾರ ಸಾಲಮನ್ನಾ ಮಾಡಿಸುವ ಜವಾಬ್ದಾರಿ ಹೊರಬೇಕು. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ವಿಪಕ್ಷ ನಾಯಕ ಆರ್. ಅಶೋಕ್ ಹಾಗು ಇತರೆ ನಾಯಕರು ತಮ್ಮೊಂದಿಗೆ ದೆಹಲಿಗೆ ಬಂದು ಕೇಂದ್ರ ಸರ್ಕಾರದಿಂದ ಅನುದಾನ ಹಾಗು ರೈತರ ಸಾಲ ಮನ್ನಾಕ್ಕೆ ಆಗ್ರಹಿಸಬೇಕು. ಬರಗಾಲಕ್ಕೆ ಕೇಂದ್ರ ಸರ್ಕಾರ ಪರಿಹಾರ ಬಿಡುಗಡೆ ಮಾಡಬೇಕೆಂದು ಹೇಳಿದರು.

ಬರ ಪರಿಸ್ಥಿತಿ ಕುರಿತಂತೆ ಗುರುವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಲಾಗಿದೆ. ವಿಪಕ್ಷಗಳಿಗೆ ರೈತರು ಹಾಗು ಬರ ಪರಿಸ್ಥಿತಿಯ ಬಗ್ಗೆ ಅಧ್ಯಯನ ಮಾಡಲು, ಚರ್ಚಿಸಲು ಕಿಂಚಿತ್ತೂ ಆಸಕ್ತಿ ಇಲ್ಲ. ಬರ ಪರಿಸ್ಥಿತಿ ಚರ್ಚೆ ಬಗ್ಗೆ ಜನತಾ ದಳ ಮತ್ತು ಬಿಜೆಪಿ ಶಾಸಕರೇ ನನ್ನ ಬಳಿ ಬಂದು ಬೇಸರ ತೋಡಿಕೊಂಡಿದ್ದಾರೆ. ಅದಕ್ಕಾಗಿಯೇ ಪ್ರತ್ಯೇಕವಾಗಿ ವಿಶೇಷ ಅಧಿವೇಶನ ನಡೆಸಲಿದ್ದೇವೆ. ಆಯಾ ಕ್ಷೇತ್ರಗಳ ಭಾವನೆ, ಪರಿಸ್ಥಿತಿ ಅರ್ಥ ಮಾಡಿಕೊಂಡು ನಾನು ಅವರಿಗೆ ಸಹಾಯ ಮಾಡಬೇಕು. ನೈಜ ಪರಿಸ್ಥಿತಿಯನ್ನು ಅಧ್ಯಯನ ಮಾಡುವ ಬದಲು ವಿಪಕ್ಷಗಳು ರಾಜಕಾರಣ ಮಾಡುತ್ತಿವೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ರೈತರ ಸಮಸ್ಯೆಗಳ ಕುರಿತು ಸುದೀರ್ಘ ಚರ್ಚೆ ನಡೆಸಲು ರಾಜ್ಯ ಸರ್ಕಾರವು ಮೂರು ದಿನಗಳ ವಿಶೇಷ ಅಧಿವೇಶನ ಕರೆದಿದೆ. ಈ ಅಧಿವೇಶನದಲ್ಲಿ ಸಂಪೂರ್ಣವಾಗಿ ರಾಜ್ಯದ ಬರ ಪರಿಸ್ಥಿತಿ, ರೈತರ ತೊಂದರೆಗಳು ಮತ್ತು ಪಶ್ಚಿಮ ಘಟ್ಟಗಳ ಕುರಿತಾದ ಕಸ್ತೂರಿ ರಂಗನ್ ವರದಿಗೆ ರಾಜ್ಯ ಸಲ್ಲಿಸಬೇಕಾದ ಆಕ್ಷೇಪಣೆಗಳ ಬಗ್ಗೆ ಚರ್ಚಿಸಲಾಗುವುದೆಂದರು.

ಅಧಿವೇಶನವನ್ನು 7 ದಿನಗಳಿಗೆ ವಿಸ್ತರಿಸಬೇಕೆಂಬ ವಿಪಕ್ಷಗಳ ಬೇಡಿಕೆಯ ಬಗ್ಗೆ ಕೇಳಿದಾಗ, ಎಲ್ಲರ ಅಭಿಪ್ರಾಯವನ್ನು ನಾವು ಕೇಳುತ್ತೇವೆ. ಕೆಲವು ನಾಯಕರು ಮಾತ್ರ ತಕರಾರು ಮಾಡುತ್ತಾರೆ ಎಂದರೆ ಉಳಿದ ಶಾಸಕರು ಏನು ಮಾಡಬೇಕು. ಎಲ್ಲರೂ ಜನ ಪ್ರತಿನಿಧಿಗಳೇ, ಚರ್ಚೆಗಳಾಗಲಿ ಎಂದರು.

**ಬಿಜೆಪಿಯವರು ಅಭಿವೃದ್ಧಿ ವಿರೋಧಿಗಳು**

ಕರ್ನಾಟಕ ಸರ್ಕಾರಿ ಉದ್ಯಾನ

» ನಾಲ್ಕನೇ ಪುಟದಲ್ಲಿ

### 15 ದಿನಗಳಲ್ಲಿ ಮತ್ತಷ್ಟು ತಾಲ್ಲೂಕು ಬರಪಟ್ಟಿ

ರಾಜ್ಯದಲ್ಲಿ ಈಗಾಗಲೇ 101 ತಾಲ್ಲೂಕುಗಳನ್ನು ಬರಪೀಡಿತವೆಂದು ಘೋಷಿಸಲಾಗಿದೆ. ಮುಂದಿನ 15 ದಿನಗಳಲ್ಲಿ ಮತ್ತಷ್ಟು ತಾಲ್ಲೂಕುಗಳನ್ನು ಬರ ಪೀಡಿತ ಎಂದು ಘೋಷಿಸಲು ತೀರ್ಮಾನ ಮಾಡಲಾಗುವುದು. ಜಿಲ್ಲಾ ಸಚಿವರು ಭೇಟಿ ನೀಡಿ ಸಲ್ಲಿಸಿರುವ ವರದಿಗಳು ಮತ್ತು ಅಧಿಕಾರಿಗಳ ವರದಿಗಳನ್ನು ಆಧರಿಸಿ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಹಂತ-ಹಂತವಾಗಿ ಪಟ್ಟಿ ಬಿಡುಗಡೆ ಮಾಡಲಾಗುವುದು. ಉಳಿದ ತಾಲ್ಲೂಕುಗಳ ಬಗ್ಗೆ ವೈಜ್ಞಾನಿಕ ಪರಿಶೀಲನೆ ನಡೆಯುತ್ತಿದೆ ಎಂದು ಮುಖ್ಯಮಂತ್ರಿ ತಿಳಿಸಿದರು.



### ನಾಲಿಗೆಯ ಮೇಲೆ ಹತೋಟಿ ಇರಲಿ

ನಾನು ಮುಖ್ಯಮಂತ್ರಿ ಸ್ಥಾನದಲ್ಲಿ ಕೂತು ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ, ಕೇಂದ್ರ ಸಚಿವ ಕುಮಾರಸ್ವಾಮಿ, ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಅವರು ಬಳಸುವ ಪದಗಳನ್ನು ನಾನು ಬಳಸಲಾಗುವುದಿಲ್ಲ. ನನಗೆ ಗೌರವ ಕೊಡದಿದ್ದರೂ ನಾಡಿನ ಜನತೆ ಹಾಗು ಪಕ್ಷ ಕೊಟ್ಟಿರುವ ಸ್ಥಾನಕ್ಕಾದರೂ ಬೆಲೆ ಕೊಡಲಿ. ನಿಮ್ಮ ನಾಲಿಗೆಯ ಮೇಲೆ ಹತೋಟಿ ಇರಲಿ ಎಂದು ನಮ್ರತೆಯಿಂದ ಹೇಳುತ್ತಿದ್ದೇನೆ. ನಿಮ್ಮ ತಂದೆಯವರೂ ಕೂಡ ಇದೇ ಸ್ಥಾನವನ್ನು ಅಲಂಕರಿಸಿದ್ದರು ಎನ್ನುವ ಅರಿವು ಇರಲಿ ಎಂದು ತಿರುಗೇಟು ನೀಡಿದರು.

## ಅರ್ಹ ಮತದಾರರು ಹೊರಗುಳಿಯದಂತೆ ಕ್ರಮ

### ಸೆ.23ರವರೆಗೆ ಆಕ್ಷೇಪಣೆಗೆ ಅವಕಾಶ: ಅಪರ ಜಿಲ್ಲಾಧಿಕಾರಿ ಕೃಷ್ಣಮೂರ್ತಿ

• ಪ್ರಜೋದಯ ವರದಿ



**ಹಾಸನ:** ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ನಡೆಯುತ್ತಿದ್ದು, ಈಗಾಗಲೇ ಕರಡು ಮತದಾರರ ಪಟ್ಟಿ ಪ್ರಕಟಿಸಲಾಗಿದೆ. ಪಟ್ಟಿಗೆ ಸಂಬಂಧಿಸಿದಂತೆ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಲು ಸೆ.23 ರವರೆಗೆ ಅವಕಾಶವಿದೆ ಎಂದು ಅಪರ ಜಿಲ್ಲಾಧಿಕಾರಿ ಕೃಷ್ಣಮೂರ್ತಿ ಅವರು ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯ ಭಾಗವಾಗಿ ನೋಟೀಸ್ ನೀಡುವ ಹಾಗು ವಿಚಾರಣೆ, ಅರ್ಜಿಗಳ ವಿಲೇವಾರಿ ಪ್ರಕ್ರಿಯೆ ನಡೆಯುತ್ತಿದೆ ಎಂದು ಹೇಳಿದರು.

ಜಿಲ್ಲೆಯಲ್ಲಿ ಒಟ್ಟು 79,778 ಮತದಾರರಿಗೆ ಜಿಲ್ಲಾಡಳಿತದ ವತಿಯಿಂದ ನೋಟೀಸ್ ಜಾರಿಗೊಳಿಸಲಾಗಿದೆ. ನೋಟೀಸ್ ಪಡೆದವರು ಅದರಲ್ಲಿ ಸೂಚಿಸಿರುವ ಸ್ಥಳ, ದಿನಾಂಕ ಮತ್ತು ಸಮಯಕ್ಕೆ ವಿಚಾರಣೆಗೆ ಹಾಜರಾಗಿ, ಅಗತ್ಯ ದಾಖಲೆಗಳನ್ನು ಸಲ್ಲಿಸಬೇಕು. ಅರ್ಹ ಮತದಾರರು ಯಾವುದೇ ಕಾರಣಕ್ಕೂ ಮತದಾರರ ಪಟ್ಟಿಯಿಂದ ಹೊರಗುಳಿಯದಂತೆ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು.

ಮತದಾರರ ಪಟ್ಟಿಯಲ್ಲಿರುವ ಹೆಸರು, ವಿಳಾಸ ಸೇರಿ ಯಾವುದೇ ಮಾಹಿತಿಗೆ ಸಂಬಂಧಿಸಿದಂತೆ ಆಕ್ಷೇಪಣೆ ಅಥವಾ ತಿದ್ದುಪಡಿ ಅಗತ್ಯವಿದ್ದಲ್ಲಿ, ನಿಗದಿತ ಅವಧಿಯೊಳಗೆ ಅರ್ಜಿ ಸಲ್ಲಿಸುವಂತೆ ಅವರು ಸಾರ್ವಜನಿಕರಿಗೆ ಮನವಿ ಮಾಡಿದರು.

ಸಭೆಯಲ್ಲಿ ಆಮ್ ಆದ್ಮಿ ಪಕ್ಷದ ರಾಜ್ಯ ಉಪಾಧ್ಯಕ್ಷ ಅಗಿಲೆ ಯೋಗೇಶ್, ಬಹುಜನ ಸಮಾಜ ಪಕ್ಷದ ಜಿಲ್ಲಾಧ್ಯಕ್ಷ ಲಕ್ಷ್ಮಣ್ ಕೀರ್ತಿ, ಭಾರತೀಯ ಜನತಾ ಪಕ್ಷದ ಜಿಲ್ಲಾ ಕಾರ್ಯದರ್ಶಿ ಅಮಿತ್ ಶೆಟ್ಟಿ, ಭಾರತ ಕಮ್ಯುನಿಸ್ಟ್ ಪಕ್ಷದ ಕಾರ್ಯದರ್ಶಿ ಹೆಚ್.ಆರ್. ನವೀನ್ ಕುಮಾರ್, ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಜಿಲ್ಲಾ ಕಾರ್ಯದರ್ಶಿ ರಘು, ನ್ಯಾಷನಲ್ ಪೀಪಲ್ಸ್ ಪಾರ್ಟಿಯ ಹಾಸನ ಉಸ್ತುವಾರಿ ಶ್ರೀನಿವಾಸ್, ಜೆಡಿಎಸ್ ತಾಲ್ಲೂಕು ಅಧ್ಯಕ್ಷ ಎಸ್. ದ್ಯಾವೇಗೌಡ, ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

## ಜಿಲ್ಲಾ ಉಸ್ತುವಾರಿ ಸಚಿವರ ಪ್ರವಾಸ

• ಪ್ರಜೋದಯ ವರದಿ

**ಹಾಸನ :** ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ಸೆ.5 ರಂದು ಬೆಳಿಗ್ಗೆ 9.30ಕ್ಕೆ ಜರುಗುವ ಡಾ.ಸರ್ವಪಲ್ಲಿ ರಾಧಕೃಷ್ಣನ್‌ರವರ ಜನ್ಮ ದಿನಾಂಚರಣೆ ಹಾಗೂ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ.ಶಿವಲಿಂಗೇಗೌಡ ಅವರು ಭಾಗವಹಿಸಲಿದ್ದಾರೆ.

ಮಧ್ಯಾಹ್ನ 12 ಗಂಟೆಗೆ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ತಾಲ್ಲೂಕು ಮಟ್ಟದ ಪ್ರಜಾ ಸೇವೆ ಆಂದೋಲನಾ ಸಭೆಯಲ್ಲಿ ಭಾಗವಹಿಸುವರು. ಸಂಜೆ 7.30ಕ್ಕೆ ಚಿಂದೇನಹಳ್ಳಿ ಗಡಿಯಲ್ಲಿ ಕುರುಕ್ಷೇತ್ರ ನಾಟಕ ವೀಕ್ಷಣೆ ಮಾಡಲಿದ್ದಾರೆ.

## ಇಂದು ಡಾ.ಸರ್ವಪಲ್ಲಿ ರಾಧಕೃಷ್ಣನ್‌ರವರ ಜನ್ಮ ದಿನಾಚರಣೆ

• ಪ್ರಜೋದಯ ವರದಿ

**ಹಾಸನ :** ಡಾ. ಸರ್ವಪಲ್ಲಿ ರಾಧಕೃಷ್ಣನ್‌ರವರ ಜನ್ಮ ದಿನಾಚರಣೆ ಹಾಗೂ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪ್ರಧಾನ ಸಮಾರಂಭ ಕಾರ್ಯಕ್ರಮ ಸೆ.05 ರಂದು ಬೆಳಿಗ್ಗೆ 09.30 ಕ್ಕೆ ಹಾಸನಾಂಬ ಕಲಾಕ್ಷೇತ್ರದಲ್ಲಿ ಆಯೋಜಿಸಲಾಗಿದೆ.

ಜಿಲ್ಲಾ ಉಸ್ತುವಾರಿ ಸಚಿವ ಕೆ. ಎಂ.ಶಿವಲಿಂಗೇಗೌಡ ಅವರು ಕಾರ್ಯಕ್ರಮ ಉದ್ಘಾಟನೆ ಮಾಡಲಿದ್ದಾರೆ, ಶಾಸಕ ಹೆಚ್.ಪಿ.ಸ್ವರೂಪ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಸಂಸದ ಶ್ರೇಯಸ್ ಎಂ.ಪಟೇಲ್, ಮಾಜಿ ಸಚಿವ ಹೆಚ್.ಡಿ ರೇವಣ್ಣ, ಶಾಸಕರಾದ ಸಿ.ಎನ್.ಬಾಲಕೃಷ್ಣ, ಎ.ಮಂಜು, ಹೆಚ್.ಕೆ.ಸುರೇಶ್, ಸಿಮೆಂಟ್ ಮಂಜು, ವಿಧಾನ ಪರಿಷತ್ ಸದಸ್ಯರಾದ ಸೂರಜ್ ರೇವಣ್ಣ, ಮಧು ಜಿ, ಮಾದೇಗೌಡ, ಕೆ. ವಿವೇಕಾನಂದ, ನಗರಾಭಿವೃದ್ಧಿ ಪ್ರಾಧಿಕಾರಾದ ಅಧ್ಯಕ್ಷ ಪಟೇಲ್ ಶಿವಪ್ಪ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.ತುಮಕೂರು ವಿಶ್ವವಿದ್ಯಾ ನಿಲಯ ದ ಡೀನ್ ಶಿಕ್ಷಣ ನಿಕಾಯ, ಶಿಕ್ಷಣ ತಜ್ಞರು, ವಿಶ್ರಾಂತ ಪ್ರಾಂಶುಪಾಲ ಡಾ.ಆರ್.ಓಬಳೇಶ್ ಘಟ್ಟಿ ಅವರು ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಲಿದ್ದಾರೆ.

# ಬರದ ನಾಡಿಗೆ ನೀರಾವರಿ ಸೌಲಭ್ಯ ತರಲು ಹೋರಾಟ

### ಅರಸೀಕೆರೆ ಕ್ಷೇತ್ರ ಅಭಿವೃದ್ಧಿಗಾಗಿ ಆಡಳಿತ ಪಕ್ಷ ಸೇರಿದ್ದೇನೆ। ಸಚಿವ ಕೆ.ಎಂ.ಶಿವಲಿಂಗೇಗೌಡ

• ಪ್ರಜೋದಯ ವರದಿ



**ಅರಸೀಕೆರೆ :** ಬರಪೀಡಿತ ಅರಸೀಕೆರೆ ತಾಲ್ಲೂಕಿಗೆ ನೀರಾವರಿ ಸೌಲಭ್ಯ ತರಲು ಹೋರಾಟ ಮಾಡಿ, ಹೇಮಾವತಿ ನದಿಯಿಂದ ಕೆರೆಗಳನ್ನು ತುಂಬಿಸಲಾಗಿದೆ. ವಿರೋಧ ಪಕ್ಷದಲ್ಲಿ ಇದ್ದರೆ ಅಭಿವೃದ್ಧಿ ಮಾಡಲು ಸಾಧ್ಯವಾಗುವುದಿಲ್ಲವೆಂದು ಆಡಳಿತ ಪಕ್ಷ ಸೇರಿದ್ದೇನೆಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ.ಶಿವಲಿಂಗೇಗೌಡ ಅವರು ಹೇಳಿದರು.

ನಗರದ ಶ್ರೀ ಕೃಷ್ಣ ಸಮುದಾಯ ಭವನದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣೆ ಸಮಿತಿ ಹಾಗು ತಾಲ್ಲೂಕು ಕಾಡುಗೊಲ್ಲ ಸಂಘದ ವತಿಯಿಂದ ಶುಕ್ರವಾರ ಹಮ್ಮಿಕೊಂಡಿದ್ದ ಶ್ರೀಕೃಷ್ಣ ಜನ್ಮಾಷ್ಟಮಿ ಅಂಗವಾಗಿ ಆಯೋಜಿಸಿದ್ದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ತಾಲ್ಲೂಕಿಗೆ ನೀರಾವರಿ ಯೋಜನೆಗಳನ್ನು ತರಲು ಪ್ರಮಾಣಿಕ ಪ್ರಯತ್ನ ನಡೆಸಿ, ಹಲವು ಕಾಮಗಾರಿಗಳಿಗೆ ಅನುಮೋದನೆ ಪಡೆದುಕೊಂಡಿದ್ದೇನೆ. ತಾಲ್ಲೂಕಿನ ಕೆರೆಗಳು ಭರ್ತಿಯಾಗುವುದನ್ನು ನೋಡಿದರೆ ನನ್ನ ಜನ್ಮ ಸಾರ್ಥಕವಾಗುತ್ತದೆ ಎಂದು ತಿಳಿಸಿದರು.

ಕುಡಿಯಲು ಶುದ್ಧ ನೀರಿಲ್ಲದೆ ತಾಲ್ಲೂಕಿನ ಜನರು ಕಲುಷಿತ ನೀರನ್ನು ಕುಡಿಯುತ್ತಿದ್ದರು. ನಿಮ್ಮ ಆಶೀರ್ವಾದದಿಂದ ಕೆರೆಗಳನ್ನು ತುಂಬಿಸುವ ಕೆಲಸವಾಗಿದೆ. ಈ ಬಾರಿ ಬರ ಪರಿಸ್ಥಿತಿ ಬಂದರೂ ಕುಡಿಯುವ ನೀರಿಗೆ ಅಭಾವವಿಲ್ಲ. ಎತ್ತಿನಹೊಳೆ ಯೋಜನೆಯನ್ನು ತಾಲ್ಲೂಕಿಗೆ ತಂದು ಇನ್ನಷ್ಟು ಭಾಗಕ್ಕೆ ನೀರಾವರಿಗೆ ಸೌಲಭ್ಯ ಕಲ್ಪಿಸಲಾಗುವುದು. ನನ್ನನ್ನು ಕ್ಷೇತ್ರದ ಜನರು ನಾಲ್ಕು ಬಾರಿ ಗೆಲ್ಲಿಸಿರುವುದರಿಂದ ತಾಲ್ಲೂಕಿನಲ್ಲಿ ಬಟ್ಟೆ ಕಾರ್ಖಾನೆ ಮಾಡಿದ್ದರಿಂದ 10 ರಿಂದ 15 ಸಾವಿರ ಜನರಿಗೆ ಅನುಕೂಲ ವಾಗಿ ದೆ. ಪ್ರತಿ ಗ್ರಾಮದಲ್ಲೂ ಸಮುದಾಯ ಭವನಗಳನ್ನು ನಿರ್ಮಾಣ ಮಾಡಿ, ನೀರಾವರಿ ಯೋಜನೆಗೆ ಒತ್ತು ನೀಡಲಾಗಿದೆ ಎಂದು ಹೇಳಿದರು.

ಯುಗ, ಯುಗಾಂತರಗಳಲ್ಲಿಯೂ ಶ್ರೀರಾಮ, ಶ್ರೀಕೃಷ್ಣ, ಬುದ್ಧ, ಬಸವಣ್ಣ ಸೇರಿ ಅನೇಕ ಮಹನೀಯರು ಜನ್ಮತಾಳಿ ಸಮಾಜವನ್ನು ಸನ್ಮಾರ್ಗದಲ್ಲಿ ನಡೆಸುವ ಧರ್ಮ ಹಾಗು ಮಾನವೀಯತೆಯ ಸಂದೇಶವನ್ನು ನೀಡಿದ್ದಾರೆ. ಭಾರತವು ವಿವಿಧ ಜಾತಿ, ಮತ, ಧರ್ಮಗಳ ವೈವಿಧ್ಯತೆಯಿಂದ ಕೂಡಿದ ದೇಶವಾಗಿದೆ. ಇಲ್ಲಿನ ಸಾಧುಸಂತರು, ಪುಣ್ಯ ಪುರುಷರು, ದಾರ್ಶನಿಕರು ಕಾಲ ಕಾಲಕ್ಕೆ ಜನ್ಮತಾಳಿ ಮನುಕುಲಕ್ಕೆ ಸನ್ಮಾರ್ಗ ತೋರಿಸುವ ಸಂದೇಶಗಳನ್ನು ನೀಡಿದ್ದಾರೆಂದರು.

ಬಸವಣ್ಣ ಹಾಗು ಡಾ.ಬಿ.ಆರ್. ಅಂಬೇಡ್ಕರ್ ಅವರಂತಹ ಮಹನೀಯರು ಸಮಾನತೆಯ ಸಂದೇಶವನ್ನು ಸಾರಿದ್ದು, ಸರ್ವರಿಗೂ ಸಮಬಾಳು, ಸರ್ವರಿಗೂ ಸಮಪಾಲು ಎಂಬ ಮಾನವೀಯ ಮೌಲ್ಯಗಳ ಮಹತ್ವವನ್ನು ಜಗತ್ತಿಗೆ ತಿಳಿಸಿಕೊಟ್ಟಿದ್ದಾರೆ. ನಾಡಿನ ಸಮಸ್ತ ಜನತೆಗೆ ಭಗವಾನ್ ಶ್ರೀಕೃಷ್ಣನ ಕೃಪಾಶೀರ್ವಾದ ಸದಾ ಇರಲಿ ಎಂದು ಪ್ರಾರ್ಥಿಸುತ್ತೇನೆ.

» ನಾಲ್ಕನೇ ಪುಟದಲ್ಲಿ

### ಶ್ರೀ ಕೃಷ್ಣನ ಆದರ್ಶ ಮೈಗೂಡಿಸಿಕೊಳ್ಳಿ

ವಿವಿಧ ಜಾತಿ, ಮತ ಹಾಗೂ ಧರ್ಮಗಳ ಜನರು ಏಕತೆ ಮತ್ತು ಸೌಹಾರ್ದತೆಯಿಂದ ನೆಮ್ಮದಿಯ ಜೀವನ ನಡೆಸಲು ರಾಮಾಯಣ, ಮಹಾಭಾರತ ಹಾಗು ಭಗವದ್ಗೀತೆಯ ಧರ್ಮ ಸಂದೇಶಗಳು ಪ್ರೇರಣೆಯಾಗಿವೆ. ತಮ್ಮ ಮಕ್ಕಳು ಶ್ರೀರಾಮ ಹಾಗು ಶ್ರೀ ಕೃಷ್ಣನ ಆದರ್ಶಗಳನ್ನು ಮೈಗೂಡಿಸಿಕೊಂಡು ಬೆಳೆಯ ಬೇಕೆಂಬುದು ಪ್ರತಿಯೊಬ್ಬ ಪೋಷಕರ ಆಶಯವಾಗಿದೆ ಎಂದು ತಹಶೀಲ್ದಾರ್ ಸಂತೋಷ್ ಕುಮಾರ್ ಅವರು ಹೇಳಿದರು.

## ಸೆ.7 ರಂದು ಹೆಚ್.ಜಿ.ಗೋವಿಂದೇಗೌಡ ಶತಮಾನೋತ್ಸವ

• ಪ್ರಜೋದಯ ವರದಿ

**ಹಾಸನ:** ಮಾಜಿ ಶಿಕ್ಷಣ ಸಚಿವ ಹೆಚ್. ಜಿ.ಗೋವಿಂದೇಗೌಡ ಅವರ ಶತಮಾನೋತ್ಸವ ಸಮಾರಂಭವನ್ನು ಸೆ.7 ರಂದು ನಗರದ ಗಾಂಧಿ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಜೆ.ಆರ್.ಕೆಂಚೇಗೌಡ ಅವರು ತಿಳಿಸಿದರು.

ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಹಾಗು ವೈಜ್ಞಾನಿಕ ಮತ್ತು ಸಂಶೋಧನಾ ಪರಿಷತ್ ಜಿಲ್ಲಾ ಘಟಕದ ಸಹಯೋಗದಲ್ಲಿ ಸೆ.7 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಎಂ.ಜಿ.ರಸ್ತೆಯಲ್ಲಿರುವ ಗಾಂಧಿ ಭವನದಲ್ಲಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಗೋವಿಂದೇಗೌಡ ಅವರು ತಮ್ಮ ಸರಳತೆ ಮತ್ತು ಜನಪರ ಕಾಳಜಿಯಿಂದಲೇ ಹೆಸರಾಗಿದ್ದರು. ಶಿಕ್ಷಣವನ್ನು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ತಲುಪಿಸುವ ನಿಟ್ಟಿನಲ್ಲಿ ದೂರದೃಷ್ಟಿ ಮತ್ತು ಬದ್ಧತೆ ಹೊಂದಿದ್ದರು. ವಿಶೇಷವಾಗಿ ಗ್ರಾಮೀಣ ಪ್ರದೇಶದ ಮಕ್ಕಳು ಶಿಕ್ಷಣದಿಂದ ವಂಚಿತರಾಗಬಾರದೆಂಬ ಆಶಯದೊಂದಿಗೆ ಶಿಕ್ಷಣದ ವಿಸ್ತರಣೆಗೆ ಒತ್ತು ನೀಡಿದ್ದರು. ಶಿಕ್ಷಣದ ಗುಣಮಟ್ಟ, ಶಿಕ್ಷಕರ ಗೌರವ ಹಾಗು ವಿದ್ಯಾರ್ಥಿಗಳ ಭವಿಷ್ಯದ ಕುರಿತು ಅವರು ಹೊಂದಿದ್ದ ಕಾಳಜಿ ಇಂದಿಗೂ ಸ್ಮರಣೀಯ. ಅವರ ನೆನಪಿನಲ್ಲಿ ನಡೆಯುತ್ತಿರುವ ಕಾರ್ಯ ಕ್ರಮಕ್ಕೆ ಎಲ್ಲರೂ ಆಗಮಿಸಿ ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು.

ವೈಜ್ಞಾನಿಕ ಮತ್ತು ಸಂಶೋಧನಾ ಪರಿಷತ್ ಜಿಲ್ಲಾಧ್ಯಕ್ಷ ರವಿ ನಾಕಲಗೂಡು ಅವರು ಮಾತನಾಡಿ, ಶಾಸಕ ಹೆಚ್.ಪಿ.ಸ್ವರೂಪ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅವರು ಗೋವಿಂದೇಗೌಡರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಲಿದ್ದಾರೆ. ಕೆಯುಡಬ್ಲ್ಯೂಜೆ ರಾಜ್ಯ ಉಪಾಧ್ಯಕ್ಷ ಹೆಚ್. ಬಿ.ಮದನಗೌಡ ಅವರು ಪ್ರಸ್ತಾವಿಕವಾಗಿ ಮಾತುಗಳನ್ನಾಡಲಿದ್ದಾರೆ.

» ನಾಲ್ಕನೇ ಪುಟದಲ್ಲಿ




### ಇಂದು ನಿರಂಜನ ವಾನಳ್ಳಿ ಜೊತೆ ಸಂವಾದ

ಜಿಲ್ಲಾ ಪತ್ರಕರ್ತರ ಸಂಘದ ಸಾಂಸ್ಕೃತಿಕ ಸಮಿತಿ ಸ್ಟಡೀ ವಿತ್ ಸೊಸೈಟಿ ಪತ್ರಕರ್ತರ ಕಲಿಕೆಯ ತಾಣ ಕಾರ್ಯಕ್ರಮದಲ್ಲಿ ಶನಿವಾರ ಬೆಳಿಗ್ಗೆ 11 ಗಂಟೆಗೆ ಪತ್ರಕರ್ತರ ಭವನದಲ್ಲಿ ಡಿಜಿಟಲ್ ಯುಗದಲ್ಲಿ ಮಾಧ್ಯಮ ನೈತಿಕತೆ ಕುರಿತು ಉಪನ್ಯಾಸ-ಸಂವಾದ ಕಾರ್ಯಕ್ರಮ ನಡೆಯಲಿದೆ. ಮಾಧ್ಯಮ ತಜ್ಞರಾದ ಡಾ.ನಿರಂಜನ ವಾನಳ್ಳಿ ಮಾತನಾಡುವರು. ಸಂಘದ ಜಿಲ್ಲಾಧ್ಯಕ್ಷ ಜೆ.ಆರ್. ಕೆಂಚೇಗೌಡ ಅವರು ಅಧ್ಯಕ್ಷತೆ ವಹಿಸುವರೆಂದು ಸಂಘದ ಸಾಂಸ್ಕೃತಿಕಯ ಚಲಂ ಹಾಡ್ಲಹಳ್ಳಿ ಅವರು ತಿಳಿಸಿದರು.

## ರಾಜ್ಯದಲ್ಲಿ ಹಲವೆಡೆ ಮಳೆ ಮುನ್ಸೂಚನೆ

**ಬೆಂಗಳೂರು:** ರಾಜ್ಯದಲ್ಲಿ ಸೆಪ್ಟಂಬರ್ ವಾರಾಂತ್ಯದಲ್ಲೂ ಹಲವು ಜಿಲ್ಲೆಗಳಲ್ಲಿ ಮಳೆಯಾಗುವ ಬಗ್ಗೆ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ದಕ್ಷಿಣ ಹಾಗೂ ಉತ್ತರ ಒಳನಾಡಿನ ಹಲವು ಜಿಲ್ಲೆಗಳಲ್ಲಿ ಸೆ. 5 ಮತ್ತು 6 ರಂದು ಮಳೆಯಾಗಲಿದೆ. ಹಾಸನ, ಮೈಸೂರು, ಮಂಡ್ಯ, ಕೊಡಗು, ಚಾಮರಾಜನಗರ, ಬೆಂಗಳೂರು (ಗ್ರಾಮೀಣ), ಕೋಲಾರ ಜಿಲ್ಲೆಗಳಲ್ಲಿ ಸಾಧಾರಣ ಮಳೆಯಾಗಬಹುದು.

ಶನಿವಾರ ಬಳ್ಳಾರಿ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ, ಹಾಸನ ಹಾಗು ಸೆ.6ರಂದು ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಕೊಡಗು ಸೇರಿ ಕೆಲವೆಡೆ ಹಗುರದಿಂದ ಸಾಧಾರಣ ಆಗಲಿದೆ.

## ಅರಣ್ಯ ಇಲಾಖೆ, ಸೆಸ್ಕಾಂ ನಿರ್ಲಕ್ಷ್ಯ: ಕಾಡಾನೆ ಸಾವು

### ಕಾಡಾನೆಗಳ ರಕ್ಷಣಾ ಸಂಘದ ರಾಜ್ಯಾಧ್ಯಕ್ಷ ಹುರುಡಿ ವಿಕ್ರಂಗೌಡ ಆರೋಪ

• ಪ್ರಜೋದಯ ವರದಿ



**ಹಾಸನ:** ಕಾಡಾನೆಗಳು ಆಹಾರ ಅರಸಿ ಒಂದು ಕಡೆಯಿಂದ ಮತ್ತೊಂದು ಕಡೆಗೆ ವಲಸೆ ಹೋಗುವ ಸಂದರ್ಭದಲ್ಲಿ ವಿದ್ಯುತ್ ಸ್ಪರ್ಶ ಮತ್ತಿತರ ಕಾರಣಗಳಿಂದ ಸಾಯುತ್ತಿರುವುದನ್ನು ತಡೆಗಟ್ಟಲು ಅರಣ್ಯ ಇಲಾಖೆ ಮತ್ತು ಸೆಸ್ಕಾಂನವರು ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲವೆಂದು ಕಾಡಾನೆಗಳ ರಕ್ಷಣಾ ಸಂಘದ ರಾಜ್ಯಾಧ್ಯಕ್ಷ ಹುರುಡಿ ವಿಕ್ರಂಗೌಡ ಅವರು ಆರೋಪಿಸಿದರು.

ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಲೆನಾಡು ಭಾಗದ ಸಕಲೇಶಪುರ, ಆಲೂರು, ಬೇಲೂರು ಭಾಗಗಳಲ್ಲಿ ಕಾಡಾನೆ ಸಂತತಿ ವರ್ಷದಿಂದ ವರ್ಷಕ್ಕೆ ಹೆಚ್ಚಾಗುತ್ತಿದೆ. ಆದರೆ, ಯಾರದೋ ನಿರ್ಲಕ್ಷ್ಯಕ್ಕೆ ಕಾಡಾನೆಗಳು ಸಾಯುತ್ತಿರುವುದು ಬೇಸರದ ಸಂಗತಿ. ಕಾಡಾನೆಗಳ ರಕ್ಷಣೆಗೆ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ನಾಲ್ಕೈದು ದಿನಗಳ ಹಿಂದೆ ಗರ್ಭಿಣಿ ಹೆಣ್ಣಾನೆ ವಿದ್ಯುತ್ ಸ್ಪರ್ಶದಿಂದ ಮೃತಪಟ್ಟಿತು. ಇದು ನಿಲ್ಲಬೇಕಾದರೆ 9 ಮೀಟರ್ ಎತ್ತರದ ವಿದ್ಯುತ್ ಕಂಬ ನಿಲ್ಲಿಸಬೇಕು. ಕರೆಂಟ್ ಶಾಕ್‌ನಿಂದ ಆನೆಗಳು ಮೃತಪಟ್ಟರೆ ಅರಣ್ಯ ಇಲಾಖೆ ಮತ್ತು ಸೆಸ್ಕಾಂ ಅಧಿಕಾರಿಗಳ ಮೇಲೆಯೇ ಪ್ರಕರಣ ದಾಖಲಿಸಲಾಗುವುದೆಂದು ನ್ಯಾಯಾಲಯ ಎಚ್ಚರಿಸಿದ್ದರೂ ಆದರೂ ಪಾಲಿಸುತ್ತಿಲ್ಲ . ಇತ್ತೀಚಿನ ದಿನಗಳಲ್ಲಿ ಹಾಸನ, ಮೂಡಿಗೆರೆ ಮತ್ತು ಮಡಿಕೇರಿ ಭಾಗದಲ್ಲಿ 6 ಆನೆಗಳು ಜೀವ ಕಳೆದುಕೊಂಡಿವೆ. ಆದರೂ ಎಚ್ಚೆತ್ತುಕೊಳ್ಳುತ್ತಿಲ್ಲ. ಎತ್ತರದ ಕಂಬ ನಿಲ್ಲಿಸುತ್ತಿಲ್ಲ. ಈ ಸಂಬಂಧ ಇನ್ನಾದರೂ ಸರ್ಕಾರ ಎಚ್ಚೆತ್ತುಕೊಳ್ಳಬೇಕು, ಅಧಿಕಾರಿಗಳು ಸಿಬ್ಬಂದಿಯನ್ನೇ ಹೊಣೆ ಮಾಡಿ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು.

» ನಾಲ್ಕನೇ ಪುಟದಲ್ಲಿ

## ಶೀಘ್ರವೇ ಬಸ್ ದರ ಹೆಚ್ಚಳ

**ಬೆಂಗಳೂರು:** ಜನಸಾಮಾನ್ಯರಿಗೆ ತೊಂದರೆಯಾಗದಂತೆ ಸಾರಿಗೆ ನಿಗಮಗಳ ಬಸ್ ಟಿಕೆಟ್ ದರವನ್ನು ಶೀಘ್ರದಲ್ಲೇ ಹೆಚ್ಚಳ ಮಾಡಲಾಗುವುದೆಂದು ಸಾರಿಗೆ ಸಚಿವ ಬೈರತಿ ಸುರೇಶ್ ಅವರು ತಿಳಿಸಿದರು.

ಎಂಟು ತಿಂಗಳಲ್ಲಿ ಕೇಂದ್ರ ಸರ್ಕಾರ ತೈಲೋತ್ಪನ್ನ ದರಗಳನ್ನು ಹಲವು ಬಾರಿ ಹೆಚ್ಚಳ ಮಾಡಿದೆ. ನಾವು ಬಸ್ ಪ್ರಯಾಣ ದರ ಹೆಚ್ಚಳ ಮಾಡಿಲ್ಲ. ಇದರಿಂದ ನಮ್ಮ ನಾಲ್ಕು ಸಾರಿಗೆ ನಿಗಮಗಳಿಗೆ ಸಾವಿರಾರು ಕೋ. ರೂ.ನಷ್ಟವಾಗುತ್ತಿದೆ. ನಿವೃತ್ತ ಹಿರಿಯ ಐಎಎಸ್ ಅಧಿಕಾರಿ ಅತುಲ್ ತಿವಾರಿ ನೇತೃತ್ವದ ಸಮಿತಿ ದರ ಪರಿಷ್ಕರಣೆಗೆ ಸಂಬಂಧಿಸಿದಂತೆ ಅಧ್ಯಯನ ನಡೆಸುತ್ತಿದೆ. ಸದ್ಯದಲ್ಲೇ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಿದೆ. ಜನಸಾಮಾನ್ಯರಿಗೆ ಹೆಚ್ಚು ಹೊರೆಯಾಗದ ರೀತಿಯಲ್ಲಿ ಸ್ವಲ್ಪ ಪ್ರಮಾಣದಲ್ಲಿ ದರ ಪರಿಷ್ಕರಣೆ ಮಾಡಲಾಗುವುದೆಂದರು.

### ನೀಡಿದ್ದ ಹಣ ಕಳೆದುಕೊಂಡು ರೈತರು ಕಂಗಾಲು |ಅಮಾಯಕರನ್ನು ಪರಿಚಯಿಸಿದ್ದ ಇಬ್ಬರು ಮುಖಂಡರ ಸಾವು

# ಸಬ್ಸಿಡಿ ಸಾಲದ ಆಮಿಷ: 72ಕ್ಕೂ ಹೆಚ್ಚು ಮಂದಿಗೆ ವಂಚನೆ

-ಕೆ.ಪಿ.ಸಾಗರ್ ರಾಜು

• ಪ್ರಜೋದಯ ವರದಿ



**ಹಾಸನ:** ಪ್ರಧಾನಮಂತ್ರಿ ಉದ್ಯೋಗ ಸೃಷ್ಟಿ ಯೋಜನೆಯಡಿ ಸಬ್ಸಿಡಿ ಸಾಲ ಕೊಡಿಸುವುದಾಗಿ ನಂಬಿಸಿ 72ಕ್ಕೂ ಹೆಚ್ಚು ರೈತರು ಹಾಗು ಬಡ ಕೂಲಿ ಕಾರ್ಮಿಕರಿಂದ ಲಕ್ಷಾಂತರ ರೂ. ಕಮೀಷನ್ ಪಡೆದು ವಂಚಿಸಿರುವ ಪ್ರಕರಣ ಬೇಲೂರು ತಾಲ್ಲೂಕಿನಲ್ಲಿ ಬೆಳಕಿಗೆ ಬಂದಿದೆ. ಸಾಲದ ನಿರೀಕ್ಷೆಯಲ್ಲಿ ಹಣ ಕಳೆದುಕೊಂಡಿರುವ ಸಂತ್ರಸ್ತರು ಇದೀಗ ಸಾಲವೂ ಇಲ್ಲದೆ, ನೀಡಿದ ಹಣವೂ ಇಲ್ಲದೆ ಪರದಾಡುತ್ತಿದ್ದಾರೆ.

ಅಂಗವೈಕಲ್ಯವನ್ನೇ ಬಂಡವಾಳ ಮಾಡಿಕೊಂಡ ವಿಶೇಷಚೇತನ ವ್ಯಕ್ತಿಯೊಬ್ಬ, ಬ್ಯಾಂಕ್ ಏಜೆಂಟ್ ಎಂದು ಪರಿಚಯಿಸಿಕೊಂಡು ಈ ವಂಚನೆ ನಡೆಸಿದ್ದಾರೆಂದು ಸಂತ್ರಸ್ತರು ಆರೋಪಿಸಿದ್ದಾರೆ. ಘಟನೆಗೆ ಸಂಬಂಧಿಸಿದಂತೆ ಹಳೇಬೀಡು ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದ್ದು, ಆರೋಪಿ ಬಂಧನಕ್ಕೊಳಗಾಗಿ ಜಾಮೀನಿನ ಮೇಲೆ ಬಿಡುಗಡೆಯಾಗಿದ್ದಾರೆ. ಹಣ ಕಳೆದುಕೊಂಡವರು ವಾಪಾಸ್ ಕೊಡಿಸುವಂತೆ ಪೊಲೀಸರ ಮೊರೆ ಹೋಗಿದ್ದಾರೆ.

**ಬ್ಯಾಂಕ್ ಏಜೆಂಟ್ ಎಂದು ಪರಿಚಯ**

ಕೋಲಾರ ಜಿಲ್ಲೆ ಮುಳಬಾಗಿಲು ತಾಲ್ಲೂಕಿನ ಕಾಡೇನಹಳ್ಳಿ ಗ್ರಾಮದ ಅಂಗವಿಕಲ ಶಂಕರಪ್ಪ ತಾನು ಎಸ್‌ಬಿಐ ಹಾಗು ಕೆನರಾ ಬ್ಯಾಂಕ್‌ನ ಏಜೆಂಟ್ ಎಂದು ಹೇಳಿಕೊಂಡು ಹಳೇಬೀಡಿಗೆ ಬರುತ್ತಿದ್ದ. ಈ ವೇಳೆ ಗ್ರಾಮದ ಪ್ರಭಾವಿ ಮುಖಂಡರಾದ ದ್ಯಾವಪ್ಪನಹಳ್ಳಿ ಸೋಮಣ್ಣ ಹಾಗು ಗಿರಿಕಳ್ಳಿಯ ಈಶಣ್ಣ ಅವರ ಪರಿಚಯ ಮಾಡಿಕೊಂಡಿದ್ದ.

ಮೊದಲಿಗೆ ಇಬ್ಬರಿಗೂ ಕಡಿಮೆ ಮೊತ್ತದ ಸಾಲ ಕೊಡಿಸಿ ವಿಶ್ವಾಸ ಗಳಿಸಿದ್ದ ಶಂಕರಪ್ಪ, ತಮ್ಮ ಪರಿಚಯದ ರೈತರು ಹಾಗು ಬಡ ಕೂಲಿ ಕಾರ್ಮಿಕರಿಗೆ ಸಬ್ಸಿಡಿ ಸಾಲ ಕೊಡಿಸುವುದಾಗಿ ಭರವಸೆ ನೀಡಿದ್ದ. ಈ ವಿಷಯವನ್ನು ಯಾರಿಗೂ ತಿಳಿಸಬಾರದೆಂದು ಸೂಚಿಸಿದ್ದ ಎನ್ನಲಾಗಿದೆ. ಬಡವರಿಗೆ ಸಾಲ ದೊರೆತರೆ ಅನುಕೂಲವಾಗಲಿದೆ ಎಂಬ ಉದ್ದೇಶದಿಂದ ಸೋಮಣ್ಣ ಹಾಗು ಈಶಣ್ಣ ಅವರು ತಮ್ಮ ಪರಿಚಯದ ಹಲವರಿಗೆ ಶಂಕರಪ್ಪನನ್ನು ಪರಿಚಯಿಸಿದ್ದರು.

» ಮೂರನೇ ಪುಟದಲ್ಲಿ

### ಸಾಲವೂ ಇಲ್ಲ, ಹಣವೂ ಇಲ್ಲ

ಸಬ್ಸಿಡಿ ಸಾಲ ದೊರೆತರೆ ಹೈನುಗಾರಿಕೆ, ಕುರಿಕೋಳಿ ಸಾಕಾಣಿಕೆ ಅಥವಾ ಸಣ್ಣ ಉದ್ಯಮ ಆರಂಭಿಸಿ ಆರ್ಥಿಕವಾಗಿ ಸುಧಾರಿಸಬಹುದೆಂಬ ಆಸೆಯಿಂದ ಬಡ ರೈತರು ಹಾಗೂ ಕಾರ್ಮಿಕರು ತಮ್ಮಲ್ಲಿದ್ದ ಹಣವನ್ನು ಕಮೀಷನ್ ರೂಪದಲ್ಲಿ ನೀಡಿದ್ದಾರೆ. ಆದರೆ, ಇದೀಗ ಸಾಲವೂ ಮಂಜೂರಾಗಿಲ್ಲ. ಕೆಲವರು ಸಾಲಕ್ಕಾಗಿ ಹಣ ಹೊಂದಿಸಲು ಸಾಲ ಮಾಡಿಕೊಂಡಿದ್ದರೆ, ಇನ್ನೂ ಕೆಲವರು ತಮ್ಮ ಉಳಿತಾಯದ ಹಣವನ್ನೇ ನೀಡಿದ್ದಾರೆ.

### ಅನ್ಯಾಯವಾಯಿತೆಂದು ಜೀವ ಬಿಟ್ಟ ಇಬ್ಬರು

ನಮ್ಮನ್ನು ನಂಬಿ ಬಡವರು ಹಾಗು ಅಮಾಯಕರು ಹಣ ಕಳೆದುಕೊಂಡಿರುವುದಕ್ಕೆ ನಾವು ಕಾರಣರಾದೆವು ಎಂಬ ನೋವಿನಿಂದ ದ್ಯಾವಪ್ಪನಹಳ್ಳಿ ಸೋಮಣ್ಣ ಹಾಗು ಈಶಣ್ಣ ಮಾನಸಿಕವಾಗಿ ನೊಂದಿದ್ದರು. ಈ ಇಬ್ಬರೂ ನಂತರ ಹೃದಯಾಘಾತದಿಂದ ಮೃತಪಟ್ಟಿದ್ದಾರೆಂದು ಕುಟುಂಬಸ್ಥರು ಹಾಗೂ ಸಂತ್ರಸ್ತರು ತಿಳಿಸಿದ್ದಾರೆ. ಇದರಿಂದ ಪ್ರಕರಣ ಮತ್ತಷ್ಟು ಗಂಭೀರ ಸ್ವರೂಪ ಪಡೆದುಕೊಂಡಿದ್ದು, ವಂಚನೆಗೆ ಒಳಗಾದವರು ಪೊಲೀಸರ ಮೊರೆ ಹೋಗಿದ್ದಾರೆ.

## ಎನ್‌ಎಸ್‌ಯುಐ ಜಿಲ್ಲಾಧ್ಯಕ್ಷ ಆತ್ಮಹತ್ಯೆ



• ಪ್ರಜೋದಯ ವರದಿ

**ಬೇಲೂರು :** ಭಾರತ ರಾಷ್ಟ್ರೀಯ ವಿದ್ಯಾರ್ಥಿ ಒಕ್ಕೂಟದ (ಎನ್‌ಎಸ್‌ಯುಐ) ಜಿಲ್ಲಾಧ್ಯಕ್ಷ ಎಂ.ಟಿ. ವರುಣ್ (22) ಅವರು ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಶುಕ್ರವಾರ ಪಟ್ಟಣದ ಹೊಳೆ ಬೀದಿಯಲ್ಲಿ ನಡೆದಿದೆ.

ಮಾಳೇಗೆರೆ ಗ್ರಾಮದ ತಾರಾನಾಥ್ ಲೋಲಾಕ್ಷಿ ದಂಪತಿಯ ಪುತ್ರ ಎಂ.ಟಿ.ವರುಣ್ ಮೃತ ದೇಹ ಮನೆಯ ಕೊಠಡಿಯಲ್ಲಿ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದೆ. ಕೌಟುಂಬಿಕ ಕಲಹದ ಹಿನ್ನಲೆ ಆತ್ಮಹತ್ಯೆ ಮಾಡಿಕೊಂಡಿರಬಹುದೆಂದು ಶಂಕಿಸಲಾಗಿದೆ. ವರುಣ್ ಅವರ ಸಹೋದರ ಕೂಡ ಮೂರು ವರ್ಷಗಳ ಹಿಂದೆ ಆತ್ಮಹತ್ಯೆ ಮಾಡಿಕೊಂಡಿದ್ದರು. ಇದೀಗ ವರುಣ್ ಅವರ ಸಾವಿನಿಂದ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದೆ.

ವರುಣ್ ಜುಲೈ ತಿಂಗಳಲ್ಲಿ ಎನ್‌ಎಸ್‌ಯುಐ ಜಿಲ್ಲಾಧ್ಯಕ್ಷರಾಗಿ ನೇಮಕಗೊಂಡಿದ್ದರು. ಈ ಸಂಬಂಧ ಪಟ್ಟಣ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಪ್ರಕರಣ ದಾಖಲಿಸಿಕೊಂಡಿದ್ದಾರೆ.

### ಪಾರ್ವತಿ ಪುತ್ರ ವಿಘ್ನ ನಿವಾರಕನಿಗೂ ಪೊಲೀಸ್ ಅನುಮತಿ ಪತ್ರ । ಡಿ.ಜೆ.ಗೆ ಅವಕಾಶವಿಲ್ಲ

# ಗಣೇಶೋತ್ಸವಕ್ಕೆ 80 ಷರತ್ತು; ರಾತ್ರಿ 8 ರೊಳಗೆ ವಿಸರ್ಜನೆ ಕಡ್ಡಾಯ

• ಪ್ರಜೋದಯ ವರದಿ

**ಬೇಲೂರು:** ದೇಶಾದ್ಯಂತ ಸೆ.14ರಂದು ಗಣೇಶೋತ್ಸವ ಆಚರಿಸಲಾಗುತ್ತಿದ್ದು, ಈ ಹಿನ್ನೆಲೆಯಲ್ಲಿ ಗಣಪತಿ ಪ್ರತಿಷ್ಠಾಪನೆ, ಉತ್ಸವ ಹಾಗೂ ವಿಸರ್ಜನೆ ಸಂದರ್ಭದಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಸರ್ಕಾರ ಹಾಗೂ ಪೊಲೀಸ್ ಇಲಾಖೆ ಸುಮಾರು 80ಕ್ಕೂ ಹೆಚ್ಚು ಕಟ್ಟುನಿಟ್ಟಿನ ಷರತ್ತುಗಳನ್ನು ವಿಧಿಸಿದೆ.

ಗಣೇಶೋತ್ಸವದ ಹಿನ್ನೆಲೆಯಲ್ಲಿ ಬೇಲೂರು ನಗರದ ನೆಹರು ನಗರ ಪೊಲೀಸ್ ಠಾಣೆಯಲ್ಲಿ ಆಯೋಜಿಸಿದ್ದ ಸಾರ್ವಜನಿಕರ ಶಾಂತಿ ಸಭೆಯಲ್ಲಿ ಮಾತನಾಡಿದ ವೃತ್ತ ನಿರೀಕ್ಷಕ ರೇವಣ್ಣ ಅವರು, ಗಣಪತಿ ಪ್ರತಿಷ್ಠಾಪನೆ ಸಂದರ್ಭದಲ್ಲಿ ಸಾರ್ವಜನಿಕರಿಂದ ಮನಬಂದಂತೆ ಹಣ ವಸೂಲಿ ಮಾಡುವಂತಿಲ್ಲ. ಗಣಪತಿ ಪ್ರತಿಷ್ಠಾಪನೆಗೆ ವಿದ್ಯುತ್ ಇಲಾಖೆ, ಪುರಸಭೆ ಸೇರಿದಂತೆ ಸಂಬಂಧಪಟ್ಟ ಇಲಾಖೆಗಳ ಅನುಮತಿ ಕಡ್ಡಾಯವಾಗಿ ಪಡೆಯಬೇಕು. ಅಗ್ನಿಶಾಮಕ ಇಲಾಖೆಯ ನಿಯಮಗಳನ್ನು ಪಾಲಿಸಬೇಕು. ಅನುಮತಿ ಪಡೆಯದೆ ಗಣಪತಿ ಪ್ರತಿಷ್ಠಾಪನೆ ಮಾಡಿದರೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

**ಡಿ.ಜೆ.ಗೆ ಸಂಪೂರ್ಣ ನಿಷೇಧ:**

ಸರ್ಕಾರದ ಆದೇಶದಂತೆ ಗಣಪತಿ ವಿಸರ್ಜನೆ ಸಂದರ್ಭದಲ್ಲಿ ಡಿ.ಜೆ. ಬಳಕೆಗೆ ಸಂಪೂರ್ಣ ನಿಷೇಧವಿದೆ. ಡಿ.ಜೆ. ಮಾಲೀಕರಿಗೆ ಮುಂಗಡ ಹಣ ಪಾವತಿಸಿರುವ ನೆಪದಲ್ಲಿ ವಿಸರ್ಜನೆ ವೇಳೆ ಡಿ.ಜೆ. ಬಳಸಲು ಒತ್ತಡ ಹೇರಿದರೆ ಕಾನೂನು ಕ್ರಮ ಜರುಗಿಸಲಾಗುವುದು. ಗಣಪತಿ ಪ್ರತಿಷ್ಠಾಪನಾ ಸ್ಥಳಗಳು ಹಾಗೂ ಸೂಕ್ಷ್ಮ ಪ್ರದೇಶಗಳಲ್ಲಿ ಕಡ್ಡಾಯವಾಗಿ ಸಿ.ಸಿ. ಕ್ಯಾಮೆರಾ ಅಳವಡಿಸಬೇಕು ಎಂದರು.

ತಾಲ್ಲೂಕಿನಲ್ಲಿ 150ಕ್ಕೂ ಹೆಚ್ಚು ಸ್ಥಳಗಳಲ್ಲಿ ಗಣಪತಿ ಪ್ರತಿಷ್ಠಾಪನೆ ಯಾಗುವ ಸಾಧ್ಯತೆ ಇದ್ದು, ಗಣಪತಿ ಸಮಿತಿಗಳು ಹೆಚ್ಚಿನ ಸಂಖ್ಯೆಯಲ್ಲಿ ಸ್ವಯಂಸೇವಕರನ್ನು ನಿಯೋಜಿಸಿ ಶಿಸ್ತು ಹಾಗೂ ಭದ್ರತೆ ಕಾಪಾಡಲು ಪೊಲೀಸರೊಂದಿಗೆ ಸಹಕರಿಸಬೇಕು ಎಂದು ತಿಳಿಸಿದರು.

**ಒಂದೇ ಸೂರಿನಡಿ ಅನುಮತಿ ವ್ಯವಸ್ಥೆ**

ತಾಲ್ಲೂಕು ದಂಡಾಧಿಕಾರಿ ಶ್ರೀಧರ್ ಕಂಕಣವಾಡಿ ಅವರು ಮಾತನಾಡಿ, ಗಣಪತಿ ಪ್ರತಿಷ್ಠಾಪನೆಗೆ ಅಗತ್ಯವಿರುವ ವಿವಿಧ ಇಲಾಖೆಗಳ ಅನುಮತಿಗಳನ್ನು ಒಂದೇ ಸೂರಿನಡಿ ಪಡೆಯಲು ಒನ್ ಲೈನ್ ಕೇಂದ್ರ ತೆರೆಯಲಾಗುವುದು. ಅಗತ್ಯ ದಾಖಲೆ, ಜೆರಾಕ್ಸ್ ಹಾಗೂ ಇತರ ಸೇವೆಗಳಿಗೆ 50 ರೂ. ಶುಲ್ಕ ನಿಗದಿಪಡಿಸಲಾಗಿದೆ. ಗಣಪತಿ ವಿಸರ್ಜನೆ ನಡೆಯುವ ಬೇಲೂರು ನಗರ ಹಾಗೂ ಗ್ರಾಮೀಣ ಪ್ರದೇಶಗಳ ಕೆರೆ-ಕಟ್ಟೆಗಳ ಬಳಿ ಸಿ.ಸಿ. ಕ್ಯಾಮೆರಾ ಅಳವಡಿಸಬೇಕು ಎಂದು ಪುರಸಭೆ ಹಾಗೂ ಗ್ರಾಮ ಪಂಚಾಯಿತಿ ಅಧಿಕಾರಿಗಳಿಗೆ ಸೂಚಿಸಿದರು.



**ಪಿಒಪಿ ಗಣಪತಿಗೆ ಅವಕಾಶವಿಲ್ಲ**

ಪರಿಸರ ಸ್ನೇಹಿ ಗಣಪತಿ ಮೂರ್ತಿಗಳನ್ನು ಪ್ರತಿಷ್ಠಾಪಿಸಬೇಕು. ಪಿಒಪಿ ಗಣಪತಿ ಮೂರ್ತಿಗಳಿಗೆ ಯಾವುದೇ ಕಾರಣಕ್ಕೂ ಅವಕಾಶ ನೀಡುವುದಿಲ್ಲ ಎಂದು ಶ್ರೀಧರ್ ಕಂಕನವಾಡಿ ಸ್ಪಷ್ಟಪಡಿಸಿದರು.

ಪೂಜೆಗೆ ಬಳಸುವ ಹೂವು, ಅಗರಬತ್ತಿ, ಕರ್ಪೂರ, ಪ್ಲಾಸ್ಟಿಕ್ ಸೇರಿದಂತೆ ತ್ಯಾಜ್ಯವನ್ನು ಎಲ್ಲೆಂದರಲ್ಲಿ ಎಸೆಯದೆ ಪ್ರತ್ಯೇಕವಾಗಿ ಸಂಗ್ರಹಿಸಿ ಕಸದ ಗಾಡಿಗಳಿಗೆ ನೀಡಬೇಕು. ವಿಸರ್ಜನೆ ವೇಳೆ ಹೂವು, ಹಾರ, ತುರಾಯಿ ಸೇರಿದಂತೆ ಯಾವುದೇ ತ್ಯಾಜ್ಯವನ್ನು ಕೆರೆಗಳಿಗೆ ಹಾಕದಂತೆ ಎಚ್ಚರಿಕೆ ವಹಿಸಬೇಕು ಎಂದರು.

**ರಾತ್ರಿ 8ರೊಳಗೆ ವಿಸರ್ಜನೆ ಕಡ್ಡಾಯ:** ಡಿವೈಎಸ್ಪಿ ಗೋಪಿ ಅವರು ಮಾತನಾಡಿ, ಗಣಪತಿ ಉತ್ಸವದ ಮೆರವಣಿಗೆಗೆ ನಿಗದಿಪಡಿಸಿರುವ ಮಾರ್ಗದಲ್ಲಿಯೇ ಸಂಚರಿಸಬೇಕು. ಯಾವುದೇ ಕಾರಣಕ್ಕೂ ಮಾರ್ಗ ಬದಲಾಯಿಸುವಂತಿಲ್ಲ. ಡಿ.ಜೆ.ಗೆ ಅನುಮತಿ ನೀಡುವುದಿಲ್ಲ ಎಂದರು.

ಉತ್ಸವದಿಂದ ಸಾರ್ವಜನಿಕರ ಸಂಚಾರಕ್ಕೆ ಹಾಗೂ ರಸ್ತೆ ಬಳಕೆಗೆ ತೊಂದರೆಯಾಗದಂತೆ ಗಣಪತಿ ಸಮಿತಿಗಳು ಎಚ್ಚರಿಕೆ ವಹಿಸಬೇಕು. ಪ್ರತಿಷ್ಠಾಪನೆಯಿಂದ ವಿಸರ್ಜನೆಯ ವರೆಗೆ ಆಯೋಜಿಸುವ ಎಲ್ಲ ಕಾರ್ಯಕ್ರಮಗಳ ವಿವರವನ್ನು ಸಂಬಂಧಪಟ್ಟ ಇಲಾಖೆಗೆ ಸಲ್ಲಿಸಬೇಕು ಎಂದರು.

**ರಾತ್ರಿ 8 ಗಂಟೆಯೊಳಗೆ ಗಣಪತಿ ವಿಸರ್ಜನೆ:** ಪೂರ್ಣಗೊಳಿಸುವುದು ಕಡ್ಡಾಯ. ಗಣಪತಿ ಪ್ರತಿಷ್ಠಾಪನೆಗೆ ಅನುಮತಿ ಪಡೆಯಲು ಸೆ.7ರಿಂದ 11ರವರೆಗೆ ಅವಕಾಶ ಕಲ್ಪಿಸಲಾಗಿದ್ದು, ನಂತರ ಸಲ್ಲಿಸುವ ಅರ್ಜಿಗಳಿಗೆ ಅನುಮತಿ ನೀಡಲಾಗುವುದಿಲ್ಲ ಎಂದು ಗೋಪಿ ತಿಳಿಸಿದರು.

ಸಭೆಯಲ್ಲಿ ಸಬ್‌ಇನ್‌ಸ್ಪೆಕ್ಟರ್ ಶಿವನಗೌಡ ಜಿ. ಪಾಟೀಲ್, ಶೋಭಾ, ಪುರಸಭೆ ಮುಖ್ಯಾಧಿಕಾರಿ ಬಸವರಾಜ್ ಶಿಗ್ಗಾವಿ, ಪುರಸಭೆ ಅಧ್ಯಕ್ಷ ಅಕ್ರಂ, ಹನುಮ ಜಯಂತಿ ಅಧ್ಯಕ್ಷ ಮೆಡಿಕಲ್ ಮೋಹನ್, ಬಜರಂಗದಳ ಮುಖಂಡ ರಾದ ಭರತ್, ವೆಂಕಟೇಶ್, ಅರೇಹಳ್ಳಿ ವಿಘ್ನೇಶ್, ಪೈಂಟ್ ರವಿ, ವಿವಿಧ ಗಣಪತಿ ಸಮಿತಿಗಳ ಅಧ್ಯಕ್ಷರು, ಸದಸ್ಯರು ಉಪಸ್ಥಿತರಿದ್ದರು.

## ಕ್ರೀಡಾಪಟುಗಳಿಗೆ ಬೀಳ್ಕೊಡುಗೆ, ಕ್ರೀಡಾ ಸಮವಸ್ತ್ರ ವಿತರಣೆ




• ಪ್ರಜೋದಯ ವರದಿ

**ಶಾಂತಿಗ್ರಾಮ:** ಹಾಸನದ ಕ್ರೀಡಾಂಗಣದಲ್ಲಿ ಸೆ.7 ಮತ್ತು 8 ರಂದು ನಡೆಯಲಿರುವ ಹಾಸನ ತಾಲ್ಲೂಕು ದಕ್ಷಿಣ ವಲಯ ಗ್ರಾಮಾಂತರ ಪ್ರೌಢಶಾಲೆಗಳ ಬಾಲಕ - ಬಾಲಕಿಯರ ಕ್ರೀಡಾಕೂಟದಲ್ಲಿ ಭಾಗವಹಿಸಲಿರುವ ಶಾಂತಿಗ್ರಾಮ ಕೆ.ಪಿ.ಎಸ್. ಪೌಢಶಾಲೆಯ ಕ್ರೀಡಾಪಟುಗಳಿಗೆ ಹಳೆಯ ಶಾಲಾ-ಕಾಲೇಜು ವಿದ್ಯಾರ್ಥಿ ಸಂಘ, ಶಾಲಾ ಸಿಬ್ಬಂದಿ ಹಾಗೂ ಗ್ರಾಮಸ್ಥರ ವತಿಯಿಂದ ಇತ್ತೀಚೆಗೆ ಬೀಳ್ಕೊಡುಗೆ ನೀಡಲಾಯಿತು.

ಕ್ರೀಡಾಕೂಟದಲ್ಲಿ ಉತ್ತಮ ಸಾಧನೆ ಮಾಡುವ ಉದ್ದೇಶದಿಂದ ತರಬೇತಿ ಪಡೆದಿರುವ ವಿದ್ಯಾರ್ಥಿಗಳಿಗೆ ಕಾರ್ಯಕ್ರಮದಲ್ಲಿ ಕ್ರೀಡಾ ಸಮವಸ್ತ್ರಗಳನ್ನು ವಿತರಿಸಿ, ಶುಭ ಹಾರೈಸಲಾಯಿತು.

ತಾಲ್ಲೂಕು ಶಿಕ್ಷಣ ಇಲಾಖೆ, ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕೆಪಿಎಸ್ ಶಾಂತಿಗ್ರಾಮ ಪೌಢಶಾಲೆಯ ಸಂಯುಕ್ತ ಆಶ್ರಯದಲ್ಲಿ ಈ ಕ್ರೀಡಾಕೂಟ ನಡೆಯಲಿದೆ.

ಹಳೆಯ ಶಾಲಾ-ಕಾಲೇಜು ವಿದ್ಯಾರ್ಥಿ ಸಂಘದ ಸಂಚಾಲಕ ಜಿ.ಆರ್.ಮಂಜೇಶ, ದಾನಿ ಭಾರ್ಗವಿ ಗೋಪಿನಾಥ, ಸಂಘದ ಕಾರ್ಯದರ್ಶಿ ಎಸ್. ರಂಗಪ್ಪ, ಜಿಲ್ಲಾ ಸೈನಿಕರ ಸಂಘದ ಮಾಜಿ ಅಧ್ಯಕ್ಷ ಜಿ.ಎನ್. ನಾಗರಾಜು, ಎಸ್.ಕೆ.ಅಶೋಕ, ಜಿ.ಎಲ್.ಕುಮಾರ ಸ್ವಾಮಿ, ವಾಸು ಹಾಗೂ ಗಿರೀಶ್ ಅವರು ಕ್ರೀಡಾಪಟುಗಳಿಗೆ ಶುಭ ಹಾರೈಸಿ, ಕ್ರೀಡಾಕೂಟದಲ್ಲಿ ಶಾಲೆಗೆ ಕೀರ್ತಿ ತರುವಂತೆ ಪ್ರೋತ್ಸಾಹಿಸಿದರು.

ಶಾಲಾ ಕ್ರೀಡಾಪಟುಗಳು ಕ್ರೀಡಾಕೂಟದಲ್ಲಿ ಉತ್ಸಾಹದಿಂದ ಪಾಲ್ಗೊಂಡು ಉತ್ತಮ ಸಾಧನೆ ಮಾಡುವ ವಿಶ್ವಾಸ ವ್ಯಕ್ತಪಡಿಸಿದರು.

## ಲಿಂಗಾಪುರದ ಗೌರಿ ಕೆರೆಗೆ ಬಿದ್ದು ಜಿಂಕೆ ಸಾವು

ಅರೇಹಳ್ಳಿ: ಗ್ರಾಮ ಪಂಚಾಯಿತಿ ವ್ಯಾಪ್ತಿಯ ಲಿಂಗಾಪುರ ಗ್ರಾಮದ ಗೌರಿ ಕೆರೆಯಲ್ಲಿ ಅಂತರಗಂಗೆಯಿಂದ ಆವೃತವಾಗಿದ್ದ ಕೆರೆಗೆ ಬಿದ್ದ ಜಿಂಕೆಯೊಂದು ಮೃತಪಟ್ಟಿರುವ ಘಟನೆ ಕೆಲ ದಿನಗಳ ಹಿಂದೆ ನಡೆದಿದೆ.

ಕೆರೆಗೆ ಜಿಂಕೆ ಬಿದ್ದಿರುವುದನ್ನು ಗಮನಿಸಿದ ಸ್ಥಳೀಯ ನಿವಾಸಿ ಹರೀಶ್ ಶೆಟ್ಟಿ ಅವರು ತಕ್ಷಣ ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆ. ಮಾಹಿತಿ ದೊರೆತ ಬಳಿಕ ಅರಣ್ಯ ಇಲಾಖೆ ಸಿಬ್ಬಂದಿಗಳು ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿದ್ದಾರೆ. ಈ ವೇಳೆ ಕೆರೆಯಲ್ಲಿ ಮೃತಪಟ್ಟಿದ್ದ



ಜಿಂಕೆಯ ಕಳೇಬರವನ್ನು ಸಿಬ್ಬಂದಿಗಳು ಹೊರತೆಗೆದಿದ್ದಾರೆ.

## ಗುತ್ತಿನಕೆರೆಯಲ್ಲಿ ಸಡಗರದ ಶ್ರೀಕೃಷ್ಣ ಜನ್ಮಾಷ್ಟಮಿ

• ಪ್ರಜೋದಯ ವರದಿ

**ಹಾರನಹಳ್ಳಿ:** ಇಲ್ಲಿಗೆ ಸಮೀಪದ ಗುತ್ತಿನಕೆರೆ ಗ್ರಾಮದ ಪುರಾಣ ಪ್ರಸಿದ್ಧ ಶ್ರೀರಂಗ ಕ್ಷೇತ್ರದಲ್ಲಿ ಶ್ರೀಕೃಷ್ಣ ಜನ್ಮಾಷ್ಟಮಿ ಮಹೋತ್ಸವವು ಶುಕ್ರವಾರ ವೈಭವದಿಂದ ಜರುಗಿತು.



ಬೆಳಿಗ್ಗೆಯಿಂದಲೇ ದೇವಾಲಯದಲ್ಲಿ ಭಕ್ತರ ದಂಡೇ ಹರಿದು ಬಂದಿತ್ತು. ಶ್ರೀ ಸ್ವಾಮಿಯವರಿಗೆ ಫಲ, ಪಂಚಾಮೃತಗಳಿಂದ ಅಭಿಷೇಕ, ನಂತರ ಕೆಂಪು, ಹಳದಿ, ಬಿಳಿ, ಗುಲಾಬಿ ಬಣ್ಣದ ಸುಗಂಧ ಪುಷ್ಪಗಳಿಂದ ವಿಶೇಷ ಅಲಂಕಾರ ಮಾಡಲಾಗಿತ್ತು. ಹೂವಿನ ಅಲಂಕಾರದಲ್ಲಿ ಶ್ರೀ ರಂಗನಾಥ ಸ್ವಾಮಿ ಕಂಗೊಳಿಸುತ್ತಿದ್ದ ದೃಶ್ಯ ಭಕ್ತರ ಕಣ್ಮನ ಸೆಳೆಯಿತು.

ವಿವಿಧ ಅಭಿಷೇಕ, ಅಲಂಕಾರದ ನಂತರ ಮಹಾಮಂಗಳಾರತಿ ನೆರವೇರಿತು. ನಂತರ ಶ್ರೀ ರಂಗನಾಥಸ್ವಾಮಿ, ಕೈಯಡೆ ಉತ್ಸವದ ಧೂತರಾಯಸ್ವಾಮಿ, ಚಲುವರಾಯಸ್ವಾಮಿ, ಸೋಮಗಳಿಗೆ ವಿಶೇಷ ಹೂವಿನ ಅಲಂಕಾರ, ಕೆಂಚರಾಯ ಸ್ವಾಮಿ ಹಾಗೂ ಶ್ರೀಕೃಷ್ಣನ ಭಾವಚಿತ್ರದೊಂದಿಗೆ ಗುತ್ತಿನಕೆರೆ ಗ್ರಾಮದ ರಾಜಬೀದಿಗಳಲ್ಲಿ ವೈಭವದ ಉತ್ಸವ ಜರುಗಿತು. ಕರಡೆ ವಾದ್ಯಗಳು ಉತ್ಸವಕ್ಕೆ ಮೆರಗು ನೀಡಿದವು. ಉತ್ಸವದಲ್ಲಿ ಭಕ್ತರು ಜೈ ಶ್ರೀಕೃಷ್ಣ ಜೈ ಶ್ರೀರಂಗ ಘೋಷಣೆಗಳೊಂದಿಗೆ ಸಂಭ್ರಮದಿಂದ ಪಾಲ್ಗೊಂಡರು. ಕೊನೆಯಲ್ಲಿ ಸರ್ವ ಭಕ್ತರಿಗೆ ತೀರ್ಥ ಪ್ರಸಾದ ವಿನಿಯೋಗ ನಡೆಯಿತು.

ದೇವಾಲಯದ ಅರ್ಚಕ ರಾಕೇಶ್ ಅವರ ತಂಡ ಪೂಜಾ ಹಾಗೂ ಅಲಂಕಾರ ಸೇವೆ ಮಾಡಿದ್ದರು. ದೇವಾಲಯ ಸಮಿತಿ, ಗ್ರಾಮಸ್ಥರು ಮತ್ತು ಯುವಕ ಮಂಡಳಿಯವರು ಕಾರ್ಯಕ್ರಮವನ್ನು ಅತ್ಯಂತ ಯಶಸ್ವಿಯಾಗಿ ಆಯೋಜಿಸಿದ್ದರು.

## ಅಣಬೆ ಬೇಸಾಯ ಕುರಿತು ರೈತರಿಗೆ ತರಬೇತಿ

• ಪ್ರಜೋದಯ ವರದಿ

**ಹಾಸನ:** ಚಿಕ್ಕಮತಿಘಟ್ಟದಲ್ಲಿ ಕೃಷಿ ಮತ್ತು ಪೂರಕ ಚಟುವಟಿಕೆಗಳ ಮೂಲಕ ರೈತರ ಆದಾಯ ಹೆಚ್ಚಿಸುವ ಉದ್ದೇಶದಿಂದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾನಿಲಯ ಮಂಡ್ಯ, ಕೃಷಿ ಮಹಾವಿದ್ಯಾಲಯ ಕಾರೆಕೆರೆ ಅಂತಿಮ ವರ್ಷದ ವಿದ್ಯಾರ್ಥಿಗಳು ಗ್ರಾಮೀಣ ಕೃಷಿ ಕಾರ್ಯಾನುಭವ ಶಿಬಿರದ ಅಂಗವಾಗಿ ಅಣಬೆ ಬೇಸಾಯದ ಕುರಿತು ಕೈಯಾರೆ ತರಬೇತಿ ಆಯೋಜಿಸಲಾಗಿತ್ತು.



ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದ ಕೃಷಿ ಸೂಕ್ಷ್ಮಾಣು ಜೀವಿಶಾಸ್ತ್ರ ವಿಭಾಗದ ಡಾ.ಹೆಚ್.ಗುರುಮೂರ್ತಿ ಅವರು ಮಾತನಾಡಿ, ಅಣಬೆ ಬೇಸಾಯದ ಮಹತ್ವ, ಕಡಿಮೆ ಸ್ಥಳದಲ್ಲಿ ಹಾಗೂ ಕಡಿಮೆ ಬಂಡವಾಳದಲ್ಲಿ ಕೈಗೊಳ್ಳಬಹುದಾದ ಅಣಬೆ ಉತ್ಪಾದನೆಯ ಸಾಧ್ಯತೆಗಳು ಮತ್ತು ಉದ್ಯಮಶೀಲತೆಯ ಅವಕಾಶಗಳ ಕುರಿತು ತರಬೇತಿ ನೀಡಿದರು.

ತರಬೇತಿಯ ಭಾಗವಾಗಿ ತಳಿರು ಬೀಜ ಬಳಕೆ, ಬೆಳೆಯ ಮಾಧ್ಯಮದ ತಯಾರಿ, ಶುದ್ಧೀಕರಣ/ ನಿರ್ಜಲೀಕರಣ, ಹಾಕುವ ವಿಧಾನ, ಚೀಲಗಳ ನಿರ್ವಹಣೆ, ತೇವಾಂಶ ಮತ್ತು ತಾಪಮಾನ ನಿಯಂತ್ರಣ, ಬೆಳೆಯ ನಿರ್ವಹಣೆ ಹಾಗೂ ಕೊಯ್ಲು ಮುಂತಾದ ತಾಂತ್ರಿಕ ವಿಧಾನಗಳನ್ನು ಪ್ರಾಯೋಗಿಕವಾಗಿ ರೈತರಿಂದಲೇ ಮಾಡಿಸಿ ಪ್ರದರ್ಶಿಸಲಾಯಿತು.

ತರಬೇತಿಗಾರರು ಸ್ವತಃ ಪ್ರಾಯೋಗಿಕ ಚಟುವಟಿಕೆಗಳಲ್ಲಿ ಭಾಗವಹಿಸಿ ಅಣಬೆ ಉತ್ಪಾದನೆಯ ವಿವಿಧ ಹಂತಗಳನ್ನು ಕಲಿತರು. ಇಂತಹ ಪ್ರಾಯೋಗಿಕ ತರಬೇತಿಗಳು ಅಣಬೆ ಬೇಸಾಯವನ್ನು ವೈಜ್ಞಾನಿಕವಾಗಿ ಕೈಗೊಳ್ಳಲು ಅಗತ್ಯವಾದ ಕೌಶಲ್ಯವನ್ನು ಬೆಳೆಸಲು ಸಹಕಾರಿಯಾಗುತ್ತವೆ.

ಅಣಬೆಗಳ ಕೊಯ್ಲಿನ ನಂತರದ ನಿರ್ವಹಣೆ, ಮೌಲ್ಯವರ್ಧನೆ, ಪ್ಯಾಕೇಜಿಂಗ್, ಮಾರುಕಟ್ಟೆ ವ್ಯವಸ್ಥೆ ಮತ್ತು ಅಣಬೆ ಆಧಾರಿತ ಉದ್ಯಮಶೀಲತೆ ಕುರಿತಂತೆಯೂ ಮಾಹಿತಿ ನೀಡಲಾಯಿತು. ಇನ್ನಿತರೆ ಸಂಸ್ಥೆಗಳ ತರಬೇತಿ ಕಾರ್ಯಕ್ರಮಗಳಲ್ಲಿಯೂ ಅಣಬೆ ಬೇಸಾಯದ ಜೊತೆಗೆ ಸಂಸ್ಕರಣೆ, ಮೌಲ್ಯವರ್ಧನೆ, ಮಾರುಕಟ್ಟೆ ಮತ್ತು ಉದ್ಯಮಶೀಲತೆಗೆ ವಿಶೇಷ ಒತ್ತು ನೀಡಲಾಗುತ್ತಿದೆ ಎಂದು ವಿವರಿಸಲಾಯಿತು.

## ಒಂದು ಲಕ್ಷಕ್ಕೆ 13 ಸಾವಿರ ಕಮೀಷನ್

» ಮೊದಲನೇ ಪುಟದಿಂದ

ಸುಮಾರು 72ಕ್ಕೂ ಹೆಚ್ಚು ಮಂದಿ ಯಿಂದ ಆಧಾರ್ ಕಾರ್ಡ್, ಪ್ಯಾನ್ ಕಾರ್ಡ ಸೇರಿ ಅಗತ್ಯ ದಾಖಲೆಗಳನ್ನು ಪಡೆದು ಕೊಂಡಿದ್ದ ಶಂಕರಪ್ಪ, ಅರ್ಜಿದಾರರ ಸಿಬಿಲ್ ಸ್ಕೋರ್ ಉತ್ತಮವಾಗಿದೆ. ಕುರಿ, ಕೋಳಿ, ಹಸು ಸಾಕಾಣಿಕೆ ಸೇರಿ ಪೇಪರ್ ಲೋಟ ತಯಾರಿಕಾ ಯಂತ್ರ ಖರೀದಿಗೆ 1 ಲಕ್ಷದಿಂದ 50 ಲಕ್ಷದವರೆಗೆ ಸಬ್ಸಿಡಿ ಸಾಲ ಮಂಜೂರಾಗಲಿದೆ ಎಂದು ನಂಬಿಸಿದ್ದ ಎನ್ನಲಾಗಿದೆ.

ಸಾಲ ಮಂಜೂರಾತಿಗಾಗಿ ಪ್ರತಿ 1 ಲಕ್ಷಕ್ಕೆ 13 ಸಾವಿರದಂತೆ ಕಮೀಷನ್ ನೀಡ ಬೇಕೆಂದು ಹೇಳಿ ಹಣ ಪಡೆದಿದ್ದಾನೆ. ಹೀಗೆ ಸಂತ್ರಸ್ತರಿಂದ ಒಟ್ಟಾರೆ 1 ಕೋ.ರೂ.ಗೂ ಅಧಿಕ ಮೊತ್ತವನ್ನು ಕಮೀಷನ್ ರೂಪದಲ್ಲಿ ಸಂಗ್ರಹಿಸಿದ್ದಾನೆಂದು ಆರೋಪಿಸಲಾಗಿದೆ. ಹಣ ಪಡೆದುಕೊಂಡ ಬಳಿಕ ಶಂಕರಪ್ಪ ತನ್ನ ಮೊಬೈಲ್ ಸ್ವಿಚ್‌ಆಫ್ ಮಾಡಿಕೊಂಡು ಹಳೇಬೀಡಿಗೆ ಬರುವುದನ್ನು ನಿಲ್ಲಿಸಿದ್ದಾನೆ. ಇದರಿಂದ ಅನುಮಾನಗೊಂಡ ಹಣ ನೀಡಿದ್ದವರು ಆತನ ಮನೆಗೆ ತೆರಳಿ ಸಾಲ ಕೊಡಿಸುವಂತೆ ಅಥವಾ ಪಡೆದ ಹಣವನ್ನು ಹಿಂದಿರುಗಿಸುವಂತೆ ಒತ್ತಾಯಿಸಿದ್ದಾರೆ. ಹಣ ವಾಪಾಸ್ ನೀಡುವುದಾಗಿ ಹೇಳಿದ್ದ ಶಂಕರಪ್ಪ ಬಳಿಕ ತಲೆಮರೆಸಿಕೊಂಡಿದ್ದಾನೆಂದು ಸಂತ್ರಸ್ತರು ದೂರಿದ್ದಾರೆ.

ಒಬ್ಬರಿಂದ ದೂರು, ತನಿಖೆ ಚುರುಕು

ವಂಚನೆಗೊಳಗಾದವರು ಹಳೇಬೀಡು ಪೊಲೀಸ್ ಠಾಣೆಗೆ ದೂರು ನೀಡಿದ್ದು, ಒಬ್ಬರಿಂದ ದೂರು ಪಡೆದು ಪೊಲೀಸರು ಪ್ರಕರಣ ದಾಖಲಿಸಿಕೊಂಡು ಶಂಕರಪ್ಪನನ್ನು ಬಂಧಿಸಿದ್ದರು. ಬಳಿಕ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿತ್ತು. ಸದ್ಯ ಆರೋಪಿ ಜಾಮೀನಿನ ಮೇಲೆ ಹೊರಬಂದಿದ್ದು, ಹಣ ವಾಪಾಸ್ ಕೇಳುತ್ತಿರುವ ಸಂತ್ರಸ್ತರಿಗೆ ನ್ಯಾಯಾಲಯದ ಮೂಲಕ ಪಡೆದುಕೊಳ್ಳಿ ಎಂದು ಹೇಳುತ್ತಿದ್ದಾರೆಂದು ಹಣ ಕಳೆದುಕೊಂಡವರು ದೂರಿದ್ದಾರೆ.

ಶಂಕರಪ್ಪ ಹಳೇಬೀಡು ಮಾತ್ರವಲ್ಲದೆ ಚಿಕ್ಕಬಳ್ಳಾಪುರ, ಮಂಡ್ಯ ಹಾಗು ಮೈಸೂರು ಜಿಲ್ಲೆಗಳಲ್ಲಿಯೂ ಇದೇ ರೀತಿಯ ವಂಚನೆ ನಡೆಸಿದ್ದಾರೆಂಬ ಆರೋಪಗಳು ಕೇಬಂದಿವೆ.

ವಂಚನೆಗೊಳಗಾದ ಎಲ್ಲರಿಂದಲೂ ದೂರು ಪಡೆದು ಸಮಗ್ರ ತನಿಖೆ ನಡೆಸಬೇಕು. ಹಣ ಪಡೆದಿರುವುದಕ್ಕೆ ಸಂಬಂಧಿಸಿದ ದಾಖಲೆಗಳು, ಬ್ಯಾಂಕ್ ವಹಿವಾಟು ಹಾಗೂ ಇತರ ಸಾಕ್ಷ್ಯಗಳನ್ನು ಪರಿಶೀಲಿಸಿ ಸಂತ್ರಸ್ತರ ಹಣ ವನ್ನು ವಾಪಸ್ ಕೊಡಿಸುವ ನಿಟ್ಟಿನಲ್ಲಿ ಪೊಲೀಸರು ಕ್ರಮ ಕೈಗೊಳ್ಳಬೇಕು. ವಿವಿಧ ಜಿಲ್ಲೆಗಳಲ್ಲಿ ಇದೇ ರೀತಿಯ ವಂಚನೆ ನಡೆದಿದೆಯೇ ಎಂಬುದನ್ನೂ ತನಿಖೆ ನಡೆಸಬೇಕೆಂದು ಸಂತ್ರಸ್ತರು ಒತ್ತಾಯಿಸಿದ್ದಾರೆ.

## ಸೆ.8 ರಂದು ನೇರ ಸಂದರ್ಶನ

ಹಾಸನ: ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಹಾಸನ ಮತ್ತು ಹಾಸನ ಜಿಲ್ಲೆಯ ಭಾರತ್ ಫೈನಾನ್ಸ್ ಇನ್‌ಕ್ಲ್ಯೂಷನ್ ಲಿಮಿಟೆಡ್ ಮತ್ತು ಎಲ್.ಐ.ಸಿ ಸಂಸ್ಥೆಯ ಸಹಭಾಗಿತ್ವದಲ್ಲಿ ಖಾಸಗಿ ಸಂಸ್ಥೆಗೆ ಜಿಲ್ಲೆಯ ಯುವಕ ಯುವತಿಯರಿಗೆ ಉದ್ಯೋಗ ನೀಡುವ ಸಂಬಂಧ ಸೆ.8 ರಂದು ಬೆಳಿಗ್ಗೆ 10.30 ಕ್ಕೆ ಸರ್ಕಾರಿ ಐ.ಟಿ.ಐ ಕಾಲೇಜಿನ ಆವರಣದಲ್ಲಿ ನೇರ ಸಂದರ್ಶನ ನಡೆಯಲಿದೆ.

ಫೈನಾನ್ಸಿಯಲ್ ಮತ್ತು ಭೀಮಸಖಿ ಯೋಜನೆಯಡಿಯಲ್ಲಿ ಐ.ಟಿ.ಐ, ಪಿ.ಯು.ಸಿ, ಡಿಪ್ಲೋಮೊ ಮತ್ತು ಯಾವುದೇ ಪದವಿ ಪಾಸಾದ ಅಭ್ಯರ್ಥಿಗಳು ನೇರ ಸಂದರ್ಶನದಲ್ಲಿ ಭಾಗವಹಿಸಿ ಸದುಪಯೋಗ ಪಡೆದುಕೊಳ್ಳುವಂತೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಉದ್ಯೋಗಾಧಿಕಾರಿ ತಿಳಿಸಿದ್ದಾರೆ.

ಮಾಹಿಗಾಗಿ ದೂ. ಸಂಖ್ಯೆ: 08172-296374, 9482120663 ರವರನ್ನು ಕಚೇರಿ ವೇಳೆಯಲ್ಲಿ ಮಾತ್ರ (ಬೆಳಿಗ್ಗೆ 10.30 ರಿಂದ ಸಂಜೆ 12.30) ರವರೆಗೆ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ ಎಂದು ತಿಳಿಸಿದ್ದಾರೆ.

## ಕತ್ತರಿಘಟ್ಟದಲ್ಲಿ ಜೈವಿಕ ಇಂಧನ ಕುರಿತು ಜಾಗೃತಿ




• ಪ್ರಜೋದಯ ವರದಿ

**ಕತ್ತರಿಘಟ್ಟ:** ಗ್ರಾಮೀಣ ಕೃಷಿ ಕಾರ್ಯಾನುಭವ ಶಿಕ್ಷಣ ಕಾರ್ಯಕ್ರಮದ ಅಂಗವಾಗಿ ಗ್ರಾಮದಲ್ಲಿ ರೈತರಿಗೆ ಜೈವ ಇಂಧನದ ಕುರಿತು ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದಲ್ಲಿ ಜೈವಿಕ ಇಂಧನದ ಮಹತ್ವ, ಅದರ ವಿವಿಧ ವಿಧಗಳು, ಬಳಕೆ ಹಾಗೂ ಭವಿಷ್ಯದಲ್ಲಿ ಅದರ ಅಗತ್ಯತೆಯ ಕುರಿತು ರೈತರಿಗೆ ಮಾಹಿತಿ ನೀಡಲಾಯಿತು.

ಕೃಷಿ ತ್ಯಾಜ್ಯ, ಬೆಳೆ ಅವಶೇಷಗಳು, ಜೈವಿಕ ತ್ಯಾಜ್ಯ ಹಾಗೂ ಇತರೆ ನವೀಕರಿಸಬಹುದಾದ ಸಂಪನ್ಮೂಲಗಳನ್ನು ಬಳಸಿಕೊಂಡು ಜೈವ ಇಂಧನವನ್ನು ಉತ್ಪಾದಿಸಬಹುದಾದ ವಿಧಾನಗಳ ಬಗ್ಗೆ ವಿವರಿಸಲಾಯಿತು. ಬಯೋಗ್ಯಾಸ್, ಬಯೋಎಥನಾಲ್ ಮತ್ತು ಬಯೋಡೀಸೆಲ್ ಸೇರಿದಂತೆ ವಿವಿಧ ಜೈವ ಇಂಧನಗಳ ಬಳಕೆ, ಅವುಗಳ ಪ್ರಯೋಜನಗಳನ್ನು ತಿಳಿಸಲಾಯಿತು.

ಪ್ರಸ್ತುತ ಪಳೆಯುಳಿಕೆ ಇಂಧನಗಳ ಮೇಲಿನ ಅವಲಂಬನೆ, ಇಂಧನದ ಹೆಚ್ಚುತ್ತಿರುವ ಬೇಡಿಕೆ ಹಾಗೂ ಪರಿಸರ ಮಾಲಿನ್ಯದ ಹಿನ್ನೆಲೆಯಲ್ಲಿ ಜೈವ ಇಂಧನವು ಭವಿಷ್ಯದ ಪರ್ಯಾಯ ಮತ್ತು ಪರಿಸರ ಸ್ನೇಹಿ ಇಂಧನ ಮೂಲವಾಗಿದೆ ಎಂದು ರೈತರಿಗೆ ಮನವರಿಕೆ ಮಾಡಲಾಯಿತು. ಕೃಷಿ ತ್ಯಾಜ್ಯವನ್ನು ಸಮರ್ಪಕವಾಗಿ ಬಳಕೆ ಮಾಡುವ ಮೂಲಕ ತ್ಯಾಜ್ಯ ನಿರ್ವಹಣೆ, ಪರಿಸರ ಸಂರಕ್ಷಣೆ ಹಾಗೂ ಇಂಧನ ಉತ್ಪಾದನೆಗೆ ಸಹಕಾರಿಯಾಗಬಹುದು ಎಂದು ತಿಳಿಸಲಾಯಿತು.

ಕಾರ್ಯಕ್ರಮದ ಮೂಲಕ ರೈತರಲ್ಲಿ ನವೀಕರಿಸಬಹುದಾದ ಇಂಧನ ಮೂಲಗಳ ಬಳಕೆ ಮತ್ತು ಜೈವ ಇಂಧನದ ಭವಿಷ್ಯದ ಮಹತ್ವದ ಕುರಿತು ಅರಿವು ಮೂಡಿಸಲಾಯಿತು.

### ಮನೆಯಿಂದ ಕುಟುಂಬ ಹೊರಕ್ಕೆ: 12 ದಿನಗಳ ಬಳಿಕ ಬೀಗ ಒಡೆದು ಮನೆ ಪ್ರವೇಶ

## ಸಾಲ ಮರು ಪಾವತಿಸಿಲ್ಲವೆಂದು ಮನೆಗೆ ಬೀಗ

• ಪ್ರಜೋದಯ ವರದಿ

**ಹಾಸನ:** ಬರಗಾಲ ಹಾಗು ಬೆಳೆ ನಷ್ಟದಿಂದ ಸಂಕಷ್ಟದಲ್ಲಿರುವ ಬಡ ರೈತ ಕುಟುಂಬಕ್ಕೆ ಖಾಸಗಿ ಹಣಕಾಸು ಸಂಸ್ಥೆಯ ಸಿಬ್ಬಂದಿ ಕಿರುಕುಳ ನೀಡಿದ್ದಾರೆ ಎಂಬ ಆರೋಪ ಕೇಳಿಬಂದಿದೆ. ಸಾಲ ಮರುಪಾವತಿ ಮಾಡಿಲ್ಲ ಎಂಬ ಕಾರಣಕ್ಕೆ ವಾಸದ ಮನೆಗೆ ಬೀಗ ಜಡಿದು ಕುಟುಂಬವನ್ನು ಹೊರಗೆ ಕಳುಹಿಸಿದ ಘಟನೆ ತಾಲ್ಲೂಕಿನ ಉಗನೆಕೊಪ್ಪಲು ಗ್ರಾಮದಲ್ಲಿ ನಡೆದಿದೆ.

ಗ್ರಾಮದ ಸುಮಾ ಎಂಬುವವರು 2023ರಲ್ಲಿ ಈಕ್ವಿಟಾಸ್ ಸ್ಮಾಲ್ ಫೈನಾನ್ಸ್ ಬ್ಯಾಂಕ್‌ನಿಂದ ಮನೆಯನ್ನೇ ಅಡಮಾನವಿಟ್ಟು 12 ಲಕ್ಷರೂ. ಸಾಲ ಪಡೆದಿದ್ದರು. ಈ ಪೈಕಿ ಸುಮಾರು 3 ಲಕ್ಷವನ್ನು ಮರುಪಾವತಿ ಮಾಡಿದ್ದರು ಎನ್ನಲಾಗಿದೆ. ಆದರೆ, ಅಡಮಾನವಾಗಿದ್ದ ಮನೆಯ ಒಂದು ಭಾಗ ಕುಸಿದುಬಿದ್ದಿದ್ದು, ಕುಟುಂಬ ಸಂಕಷ್ಟಕ್ಕೆ ಸಿಲುಕಿತ್ತು.



ಇದರ ನಡುವೆ ಈ ವರ್ಷ ಬಿತ್ತನೆ ಮಾಡಿದ್ದ ಬೆಳೆಗೂ ಮಳೆ ಕೊರತೆಯಿಂದ ಹಾನಿಯಾಗಿದ್ದು, ಸಾಲದ ಕಂತು ಪಾವತಿಸಲು ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣವಾಗಿತ್ತು. ಸಾಲ ಮರುಪಾವತಿ ಮಾಡದ ಹಿನ್ನೆಲೆಯಲ್ಲಿ ಹಣಕಾಸು ಸಂಸ್ಥೆಯವರು ನ್ಯಾಯಾಲಯದ ಮೊರೆ ಹೋಗಿ ಮನೆ ಜಪ್ತಿ ಮಾಡಲು ಆದೇಶ ಪಡೆದಿದ್ದರು ಎನ್ನಲಾಗಿದೆ.

ನ್ಯಾಯಾಲಯದ ಆದೇಶದ ಪ್ರತಿಯನ್ನು ಮನೆಯ ಬಾಗಿಲಿಗೆ ಅಂಟಿಸಿ, ಮನೆಗೆ ಬೀಗ ಹಾಕಲಾಗಿತ್ತು. ಈ ವೇಳೆ ಕುಟುಂಬಸ್ಥರು ಮನೆ ಖಾಲಿ ಮಾಡದಂತೆ ಕೈಮುಗಿದು ಮನವಿ ಮಾಡಿಕೊಂಡರೂ ಸಿಬ್ಬಂದಿ ಒಪ್ಪದೆ ಮನೆಗೆ ಬೀಗ ಹಾಕಿದ್ದಾರೆ ಎಂದು ಕುಟುಂಬದವರು ಆರೋಪಿಸಿದ್ದಾರೆ. ಇದರಿಂದ ಸುಮಾ ಹಾಗೂ ಅವರ ಕುಟುಂಬ ಬೀದಿಗೆ ಬಿದ್ದಂತಾಗಿತ್ತು.

ಘಟನೆಯಿಂದ ಆಕ್ರೋಶಗೊಂಡ ರೈತ ಮುಖಂಡರು ಬಡ ಕುಟುಂಬದ ಪರವಾಗಿ ನಿಂತಿದ್ದು, ಸುಮಾರು 12 ದಿನಗಳ ಬಳಿಕ ಮನೆಗೆ ಹಾಕಲಾಗಿದ್ದ ಬೀಗವನ್ನು ಒಡೆದು ಹಾಕಿ ಮನೆಯ ಬಾಗಿಲು ತೆರೆದು ಸುಮಾ ಹಾಗೂ ಕುಟುಂಬಸ್ಥರನ್ನು ಮತ್ತೆ ಮನೆಗೆ ಕಳುಹಿಸಿದ್ದಾರೆ.

ಬರಗಾಲ ಹಾಗು ಬೆಳೆ ನಷ್ಟದಿಂದ ಈಗಾಗಲೇ ಸಂಕಷ್ಟದಲ್ಲಿರುವ ರೈತ ಕುಟುಂಬದ ಮೇಲೆ ಸಾಲ ವಸೂಲಾತಿ ಹೆಸರಿನಲ್ಲಿ ದೌರ್ಜನ್ಯ ನಡೆಸುವುದು ಸರಿಯಲ್ಲ ಎಂದು ರೈತ ಮುಖಂಡರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಫೈನಾನ್ಸ್‌ಗಳು ತಮ್ಮ ಸಾಲಕ್ಕಾಗಿ ಕುಟುಂಬದವರನ್ನು ಮನೆಯಿಂದ ಹೊರ ಹಾಕದಂತೆ ಸರ್ಕಾರ ಕಾನೂನು ಜಾರಿಗೆ ತಂದಿದೆ. ಹಾಗಾಗಿ ಖಾಸಗಿ ಹಣಕಾಸು ಸಂಸ್ಥೆಗಳ ಸಾಲ ವಸೂಲಾತಿ ಕ್ರಮಗಳ ಬಗ್ಗೆ ಅಧಿಕಾರಿಗಳು ಪರಿಶೀಲಿಸಿ, ಬಡ ಕುಟುಂಬಗಳಿಗೆ ಸೂಕ್ತ ರಕ್ಷಣೆ ನೀಡಬೇಕು ಎಂದು ರೈತ ಮುಖಂಡರು ಒತ್ತಾಯಿಸಿದ್ದಾರೆ.

## ಮಳೆಗಾಗಿ ಚನ್ನಕೇಶವಸ್ವಾಮಿಗೆ ಕಲ್ಯಾಣೋತ್ಸವ

• ಪ್ರಜೋದಯ ವರದಿ

**ಬೇಲೂರು:** ತಾಲ್ಲೂಕಿನಲ್ಲಿ ಉತ್ತಮ ಮಳೆಯಾಗಿ ಕೃಷಿ ಚಟುವಟಿಕೆಗಳು ಚುರುಕುಗೊಳ್ಳಬೇಕು, ಕೆರೆ ಕಟ್ಟೆಗಳು ಹಾಗು ಜಲಾಶಯಗಳು ತುಂಬಿ ರೈತರ ಬದುಕಿನಲ್ಲಿ ಸಮೃದ್ಧಿ ನೆಲೆಸಬೇಕು ಎಂಬ ಸಂಕಲ್ಪದೊಂದಿಗೆ ಶಾಸಕ ಹೆಚ್.ಕೆ.ಸುರೇಶ್ ಅವರು ತಮ್ಮ ಜನ್ಮದಿನದ ಅಂಗವಾಗಿ ಶುಕ್ರವಾರ ವಿಶ್ವವಿಖ್ಯಾತ ಚನ್ನಕೇಶವ ಸ್ವಾಮಿ ದೇವಾಲಯದಲ್ಲಿ ಕಲ್ಯಾಣೋತ್ಸವ ನೆರವೇರಿಸಿದರು.

ಕುಟುಂಬದ ಸದಸ್ಯರೊಂದಿಗೆ ಕಲ್ಯಾಣೋತ್ಸವದಲ್ಲಿ ಪಾಲ್ಗೊಂಡ ಶಾಸಕ ಹೆಚ್.ಕೆ.ಸುರೇಶ್ ಅವರು, ತಾಲ್ಲೂಕಿನಲ್ಲಿ ಉತ್ತಮ ಮಳೆಯಾಗಿ ರೈತರು ಸಮೃದ್ಧಿಯಾಗಲಿ, ಎಲ್ಲೆಡೆ ಸುಭಿಕ್ಷೆ ನೆಲೆಸಲಿ ಎಂದು ಚನ್ನಕೇಶವ ಸ್ವಾಮಿಯಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ಕಲ್ಯಾಣೋತ್ಸವದ ಅಂಗವಾಗಿ ಬೆಳಗ್ಗೆಯಿಂದಲೇ ಚನ್ನಕೇಶವಸ್ವಾಮಿ, ಸೌಮ್ಯನಾಯಕಿ ಹಾಗು ರಂಗನಾಯಕಿ ಅಮ್ಮನವರಿಗೆ ವಿವಿಧ ಧಾರ್ಮಿಕ ವಿಧಿವಿಧಾನಗಳೊಂದಿಗೆ ವಿಶೇಷ ಅಭಿಷೇಕ ಹಾಗೂ ಪೂಜೆ ನೆರವೇರಿಸಲಾಯಿತು. ದೇವಾಲಯದ ಪ್ರಧಾನ ಅರ್ಚಕರಾದ ಶ್ರೀನಿವಾಸಸ್ವಾಮಿ ಭಟ್ಟರ್ ಹಾಗು ನರಸಿಂಹಪ್ರಿಯ ಭಟ್ಟರ್ ವೈದಿಕ ಸಂಪ್ರದಾಯದಂತೆ ಪೂಜಾ ಕೈಂಕರ್ಯಗಳನ್ನು ನೆರವೇರಿಸಿದರು.



ಅಭಿಷೇಕದ ಬಳಿಕ ಚನ್ನಕೇಶವ ಸ್ವಾಮಿಗೆ ವಿವಿಧ ಬಗೆಯ ಸುಗಂಧ ಭರಿತ ಹೂವುಗಳಿಂದ ವಿಶೇಷ ಅಲಂಕಾರ ಮಾಡಲಾಗಿತ್ತು. ಇದರಿಂದ ದೇವಾಲಯದ ಆವರಣದಲ್ಲಿ ಭಕ್ತಿಮಯ ವಾತಾವರಣ ನಿರ್ಮಾಣಗೊಂಡಿತ್ತು.

ಕಲ್ಯಾಣೋತ್ಸವದ ಅಂಗವಾಗಿ ಉತ್ಸವ ಮೂರ್ತಿಗಳಾದ ಚನ್ನಕೇಶವ ಸ್ವಾಮಿ, ಸೌಮ್ಯನಾಯಕಿ ಹಾಗೂ ರಂಗನಾಯಕಿ ಅಮ್ಮನವರನ್ನು ವಿಶೇಷವಾಗಿ ಅಲಂಕರಿಸಿ, ದೇವಾಲಯದ ನಾಲ್ಕು ಮೂಲೆಗಳು ಹಾಗೂ ವೈಕುಂಠ ಬೀದಿಯ ನಾಲ್ಕು ಮೂಲೆಗಳ ಸುತ್ತಲೂ ಪ್ರದಕ್ಷಿಣೆ ನಡೆಸಲಾಯಿತು. ಎಂಟು ದಿಕ್ಕುಗಳಲ್ಲಿ ನಡೆದ ಪ್ರದಕ್ಷಿಣೆಯಲ್ಲಿ ಶಾಸಕ ಹೆಚ್.ಕೆ.ಸುರೇಶ್ ಅವರ ಕುಟುಂಬದ ಸದಸ್ಯರು, ಅಭಿಮಾನಿಗಳು ಹಾಗೂ ಭಕ್ತರು ಪಾಲ್ಗೊಂಡಿದ್ದರು.

**ಮಳೆ ಕೊರತೆ: ರೈತರಲ್ಲಿ ಆತಂಕ**

ಈ ವೇಳೆ ಶಾಸಕ ಹೆಚ್.ಕೆ.ಸುರೇಶ್ ಅವರು ಮಾತನಾಡಿ, ತಾಲ್ಲೂಕಿನ ಆರ್ಥಿಕತೆ ಬಹುಪಾಲು ಕೃಷಿಯನ್ನೇ ಅವಲಂಬಿಸಿರುವುದರಿಂದ ಮಳೆಯ ಕೊರತೆ ರೈತರು ಹಾಗೂ ಗ್ರಾಮೀಣ ಜನರಲ್ಲಿ ಆತಂಕ ಮೂಡಿಸಿದೆ. ಈ ಹಿನ್ನೆಲೆಯಲ್ಲಿ ಮಳೆಗಾಗಿ ದೇವರ ಮೊರೆ ಹೋಗಿ ಕಲ್ಯಾಣೋತ್ಸವ ನೆರವೇರಿಸಲಾಗಿದೆ. ತಾಲ್ಲೂಕಿನಲ್ಲಿ ಉತ್ತಮ ಮಳೆಯಾಗಿ ಕೆರೆಕಟ್ಟೆಗಳು ಹಾಗೂ ಜಲಾಶಯಗಳು ತುಂಬಿ, ಕೃಷಿ ಚಟುವಟಿಕೆಗಳಿಗೆ ಅನುಕೂಲಕರ ವಾತಾವರಣ ನಿರ್ಮಾಣವಾಗಬೇಕು. ರೈತರ ಬದುಕಿನಲ್ಲಿ ಸಮೃದ್ಧಿ ನೆಲೆಸುವುದರ ಜತೆಗೆ ಜನಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಎದುರಾಗಬಾರದು ಎಂಬ ಆಶಯದೊಂದಿಗೆ ವಿಶೇಷ ಪ್ರಾರ್ಥನೆ ಸಲ್ಲಿಸಲಾಗಿದೆ ಎಂದು ತಿಳಿಸಿದರು.

### ಮಡೆನೂರಿನಲ್ಲಿ ಸೆ.15 ರ ವರೆಗೂ ಜಾಬ್ ಕಾರ್ಡ್ ಮೇಳ

## ವಿಬಿಜಿ ರಾಮ್ ಜಿ ಯೋಜನೆ: 125 ದಿವಸ ಉದ್ಯೋಗ

• ಪ್ರಜೋದಯ ವರದಿ

**ಹಾಸನ:** ವಿಬಿಜಿ ರಾಮ್ ಜಿ ಯೋಜನೆಯಡಿ ಒಂದು ನೋಂದಾಯಿತ ಕುಟುಂಬಕ್ಕೆ ವರ್ಷದಲ್ಲಿ 125 ದಿವಸ ಉದ್ಯೋಗ, ಒಂದು ದಿನಕ್ಕೆ 382 ರೂ. ಕೂಲಿ ಮೊತ್ತ ನೀಡಲಾಗುತ್ತಿದೆ ಎಂದು ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಅರುಣ್‌ಕುಮಾರ್ ಅವರು ತಿಳಿಸಿದರು.

ತಾಲ್ಲೂಕಿನ ಮಡೆನೂರು ಗ್ರಾಮ ಪಂಚಾಯಿತಿಯಲ್ಲಿ ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜಗಾರ್ ಅಂಡ್ ಆಜೀವಿಕ ಮಿಷನ್ (ಗ್ರಾಮೀಣ) ಯೋಜನೆಯಡಿ ಜಾಬ್ ಕಾರ್ಡ್ ಮೇಳ ಕಾರ್ಯಕ್ರಮ ಕುರಿತು ಮಾತನಾಡಿದ ಅವರು, ಮಡೆನೂರು ಗ್ರಾಮ ಪಂಚಾಯಿತಿಯಲ್ಲಿ ಆಗಸ್ಟ್ 15 ರಿಂದ ಸೆಪ್ಟಂಬರ್ 15 ರ ವರೆಗೆ ಜಾಬ್ ಕಾರ್ಡ್ ಮೇಳ ಹಮ್ಮಿಕೊಂಡಿದ್ದು, ಕಾರ್ಯಕ್ರಮದಡಿ ಮನೆ ಮನೆ ಬೇಟಿ ನೀಡಿ ಕರಪತ್ರ ವಿತರಣೆ ಮಾಡಿ, ಸಾರ್ವಜನಿಕ ಸ್ಥಳಗಳಾದ ಹಾಲಿನ ಡೈರಿ, ಅರಳಿಕಟ್ಟೆ, ಟೀ ಅಂಗಡಿ, ರೇಷನ್ ಅಂಗಡಿ ಮುಂತಾದ ಸ್ಥಳಗಳಲ್ಲಿ ಜಾಬ್ ಕಾರ್ಡ್ ಮೇಳ ಬ್ಯಾನರ್ ಹಿಡಿದು ಆಚರಣೆ ಮಾಡುವ ಮೂಲಕ ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜಗಾರ್ ಅಂಡ್ ಆಜೀವಿಕ ಮಿಷನ್ ಯೋಜನೆ ಬಗ್ಗೆ ಸಂಪೂರ್ಣ ಮಾಹಿತಿ ನೀಡಲಾಗುತ್ತಿದೆ ಎಂದು ತಿಳಿಸಿದರು.



ಜಾಬ್ ಕಾರ್ಡ್ ಹೊಂದಿರುವ ಎಲ್ಲಾ ಕುಟುಂಬಗಳು ವೈಯಕ್ತಿಕವಾಗಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಜಾನುವಾರು ಕೊಟ್ಟಿಗೆ, ಕೋಳಿ ಶೆಡ್, ಹಂದಿ ಶೆಡ್, ಕುರು ಆಡು ಶೆಡ್ ನಿರ್ಮಾಣ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ ಹಾಗೂ ತೋಟಗಾರಿಕೆ ಇಲಾಖೆಯಡಿ ತೆಂಗು, ಸೀತಾಫಲ, ಹಲಸು, ಡ್ರಾಗನ್ ಫ್ರೂಟ್, ಅಡಿಕೆ, ದಾಳಿಂಬೆ, ಸಪೋಟ ಬೆಳೆಗಳನ್ನು ಬೆಳೆಯಲು ಆರ್ಥಿಕ ಸಹಾಯಧನ ನೀಡಲಾಗುತ್ತದೆ ಎಂದರು.

ಕೃಷಿ ಇಲಾಖೆಯಡಿ ಕೃಷಿ ಹೊಂಡ, ಗೊಬ್ಬರದ ಗುಂಡಿ, ರೈತರ ಮರುಪೂರ್ಣ ಘಟಕ ನಿರ್ಮಿಸಲು ಮತ್ತು ರೇಷ್ಮೆ ಇಲಾಖೆಯಡಿ ಕರಿಬೇವು, ಹಿಪ್ಪು ನೇರಳೆ ಮುಂತಾದ ಕಾಮಗಾರಿ ನಿರ್ಮಾಣ ಮಾಡಿಕೊಳ್ಳಲು ವಿಬಿಜಿ ರಾಮ್ ಜಿ ಯೋಜನೆಯಡಿ ಆರ್ಥಿಕ ನೆರವು ನೀಡಲಾಗುವುದು ಎಂದು ತಿಳಿಸಿದರು.

ಒಂದು ನೋಂದಾಯಿತ ಕುಟುಂಬವು ಜೀವಿತಾವಧಿಯಲ್ಲಿ ವೈಯಕ್ತಿಕ ಕಾಮಗಾರಿ ನಿರ್ಮಾಣಕ್ಕೆ 5 ಲಕ್ಷ ರೂ. ವರೆಗೆ ಆರ್ಥಿಕ ನೆರವು ಪಡೆಯಬಹುದು, ಈಗಾಗಲೇ ಕ್ರಿಯಾ ಯೋಜನೆಯಲ್ಲಿ ಅನುಮೋದನೆಯಾಗಿ ಬಂದಿರುವ ವೈಯಕ್ತಿಕ ಕಾಮಗಾರಿಗಳಿಗೆ ಸಾರ್ವಜನಿಕರಿಗೆ ವೈಯಕ್ತಿಕ ಕಾಮಗಾರಿ ನಿರ್ಮಾಣ ಮಾಡಿಕೊಳ್ಳಲು ಮಡೆನೂರು ಗ್ರಾಮ ಪಂಚಾಯಿತಿಯಿಂದ ಕಾರ್ಯಾದೇಶ ಪ್ರತಿಯನ್ನು ನೀಡಲಾಗುತ್ತಿದೆ ಎಂದು ತಿಳಿಸಿದರು.

ಗ್ರಾಮ ಪಂಚಾಯತಿ ಸಿಬ್ಬಂದಿ ಹಾಗೂ ಸಾರ್ವಜನಿಕರು ಹಾಜರಿದ್ದರು.

## ಇಂದು ಪ್ರಜಾ ಸೇವೆ ಆಂದೋಲನ ಸಭೆ

**ಹಾಸನ:** ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ.ಶಿವಲಿಂಗೇಗೌಡ ಅವರ ಅಧ್ಯಕ್ಷತೆಯಲ್ಲಿ ಸೆ.5 ರಂದು ಬೆಳಿಗ್ಗೆ 10.30 ಕ್ಕೆ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ತಾಲ್ಲೂಕು ಮಟ್ಟದ ಪ್ರಜಾ ಸೇವೆ ಆಂದೋಲನಾ ಸಭೆ ಕಾರ್ಯಕ್ರಮ ಆಯೋಜಿಸಿದ್ದು, ಸಭೆ ನಡೆಯುವ ಸಂದರ್ಭದಲ್ಲಿ ತಾಲ್ಲೂಕಿನ ಸಾರ್ವಜನಿಕರು ಹಾಜರಾಗಿ ತಮ್ಮ ಅಹವಾಲನ್ನು ಸಲ್ಲಿಸುವ ಮೂಲಕ ಸಭೆಯ ಸದುಪಯೋಗ ಪಡೆದುಕೊಳ್ಳುವಂತೆ ಜಿಲ್ಲಾಧಿಕಾರಿ ಕೆ.ಎಸ್ ಲತಾಕುಮಾರಿ ಅವರು ತಿಳಿಸಿದ್ದಾರೆ.


ಕರ್ನಾಟಕ ಸರ್ಕಾರ – ಸಾರಿಗೆ ಇಲಾಖೆ
ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿ
ಬಿ.ಕಾಟೀಹಳ್ಳಿ, ಅರಸೀಕೆರೆ ರಸ್ತೆ, ಹಾಸನ.

**ಟೆಂಡರ್ ಪ್ರಕಟಣೆ**

2026ನೇ ಸಾಲಿನ ಶ್ರೀ ಹಾಸನಾಂಬ ದೇವಿ ದರ್ಶನ ಮತ್ತು ಶ್ರೀ ಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವದ ಅಂಗವಾಗಿ ರಾಜ್ಯದ ವಿವಿದೆಡೆಯಿಂದ ಆಗಮಿಸುವ ಗಣ್ಯ ಮತ್ತು ಅತೀ ಗಣ್ಯ ವಕ್ತಿಗಳಿಗೆ ಹಾಸನ ನಗರದ ಪ್ರವಾಸಿ ಮಂದಿರದಿಂದ ಹಾಸನಾಂಬ ದೇವಿ ದೇವಸ್ಥಾನದವರೆಗೆ ಸಂಚರಿಸಲು ಸಾರಿಗೆ ಸೌಲಭ್ಯ ಒದಗಿಸಲು ಐಷಾರಾಮಿ/ಸುಸಜ್ಜಿತ/ಹವಾ ನಿಯಂತ್ರಿತ ಪ್ರಯಾಣಿಕರ FORCE URBANIA ವಾಹನಗಳನ್ನು ದೈನಂದಿನ ಬಾಡಿಗೆ ಆಧಾರದ ಮೇಲೆ ಸೇವೆಗೆ ಒದಗಿಸುವ ಸಂಬಂಧ ಅರ್ಹ ಸಾರಿಗೆ ನಿರ್ವಾಹಕರಿಂದ (Transpot Operaters) ಮುಚ್ಚಿದ ಲಕೋಟೆಯಲ್ಲಿ ದರಪಟ್ಟಿಯನ್ನು ಮಾನ್ಯ ಜಿಲ್ಲಾಧಿಕಾರಿಗಳು ಹಾಸನ ಜಿಲ್ಲೆರವರ ಕಾರ್ಯಲಯದ ಆಡಳಿತಾತ್ಮಕ ಅನುಮೋದನೆ, ಅಧಿಕೃತ ಜ್ಞಾಪನಾ ಸಂಖ್ಯೆ: ಡಿ.ವಿ.ಎಸ್.ಸಿ.ಆರ್(ಹಾಸನಾಂಬ)01/26-27 ದಿನಾಂಕ: 27.08.2026 ರಂತೆ ಕರೆಯಲಾಗಿದೆ. ಸೂಚನೆ:- ಟೆಂಡರ್‌ನ ಷರತ್ತುಗಳು ಮತ್ತು ಟೆಂಡರ್ ನಮೂನೆ ವಿವರಕ್ಕಾಗಿ ಜಿಲ್ಲಾಧಿಕಾರಿಗಳ ಕಛೇರಿ, ಉಪ-ವಿಭಾಗಾಧಿಕಾರಿಗಳ ಕಛೇರಿ ಹಾಸನ. / ಪ್ರಾದೇಶಿಕ ಸಾರಿಗೆ ಕಛೇರಿ, ಹಾಸನದ ಸೂಚನಾ ಫಲಕ ವೀಕ್ಷಿಸಬೇಕಾಗಿ ತಿಳಿಸಿದೆ.

ಸಹಿ/-ಪ್ರಾದೇಶಿಕ ಸಾರಿಗೆ
ಅಧಿಕಾರಿ, ಹಾಸನ.

ವಾಸಾಸಂಇ/ಹಿಸನಿ/ಹಾಸನ/471/ಕೆಎಸ್‌ಎಂಸಿಎ/2026-27

# ಜನಸೇವೆಯೇ ದೈವತ್ವದ ಪ್ರತೀಕ: ಸೋಮಶೇಖರ ಶ್ರೀ

## ಧರ್ಮಸ್ಥಳ ಸಂಸ್ಥೆಯಿಂದ ಜಲಸಂರಕ್ಷಣೆ, ಗ್ರಾಮಾಭಿವೃದ್ಧಿಗೆ ಆದ್ಯತೆ

• ಪ್ರಜೋದಯ ವರದಿ

**ಬೇಲೂರು:** ಸಮಾಜದ ನೋವು-ನಲಿವುಗಳಿಗೆ ಸ್ಪಂದಿಸಿ ಜನರ ಬದುಕಿನಲ್ಲಿ ಬದಲಾವಣೆ ತರುವ ಸೇವಾ ಮನೋಭಾವವೇ ದೈವತ್ವದ ಪ್ರತೀಕ ವಾಗಿದೆ ಎಂದು ಪುಷ್ಪಗಿರಿ ಕ್ಷೇತ್ರದ ಪೀಠಾಧ್ಯಕ್ಷ ಶ್ರೀ ಸೋಮಶೇಖರ ಶಿವಾಚಾರ್ಯ ಸ್ವಾಮೀಜಿ ಅವರು ಹೇಳಿದರು.

ಪಟ್ಟಣದ ಜೆ.ಪಿ.ನಗರದಲ್ಲಿರುವ ಆರ್.ವಿ.ಕನ್ವೆನ್ಷನ್ ಹಾಲ್‌ನಲ್ಲಿ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ. ಟ್ರಸ್ಟ್ ವತಿಯಿಂದ ಆಯೋಜಿಸಿದ್ದ 'ನಮ್ಮೂರು ನಮ್ಮ ಕೆರೆ' ಹಾಗು ಸಾಮೂಹಿಕ ವರಮಹಾಲಕ್ಷ್ಮಿ ಪೂಜಾ ಕಾರ್ಯಕ್ರಮದಲ್ಲಿ ಸಾನಿಧ್ಯ ವಹಿಸಿ ಮಾತನಾಡಿದ ಅವರು, ಧರ್ಮಸ್ಥಳ ಸಂಸ್ಥೆಯ ವತಿಯಿಂದ ಡಾ.ವೀರೇಂದ್ರ ಹೆಗ್ಗಡೆ ಅವರ ಮಾರ್ಗದರ್ಶನದಲ್ಲಿ ಶಿಕ್ಷಣ, ಆರೋಗ್ಯ, ಗ್ರಾಮಾಭಿವೃದ್ಧಿ, ಮಹಿಳಾ ಸಬಲೀಕರಣ ಹಾಗೂ ಜಲಸಂರಕ್ಷಣೆ ಸೇರಿ ವಿವಿಧ ಕ್ಷೇತ್ರಗಳಲ್ಲಿ ನಡೆಯುತ್ತಿರುವ ಸೇವಾ ಕಾರ್ಯಗಳು ಅಪೂರ್ವವಾಗಿವೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.



ಅನ್ನವು ದೇಹದ ಹಸಿವನ್ನು ನೀಗಿಸಿದರೆ, ಶಿಕ್ಷಣ ಮತ್ತು ಜ್ಞಾನವು ಮನುಷ್ಯನ ಜೀವನದ ಹಸಿವನ್ನು ಶಾಶ್ವತವಾಗಿ ನೀಗಿಸುವ ಅಮೂಲ್ಯ ಸಂಪತ್ತಾಗಿದೆ. ಒಮ್ಮೆ ಗಳಿಸಿದ ಜ್ಞಾನವನ್ನು ಯಾರೂ ಕಸಿದುಕೊಳ್ಳಲು ಸಾಧ್ಯವಿಲ್ಲ. ಅದು ಜೀವನದುದ್ದಕ್ಕೂ ದಾರಿದೀಪವಾಗಿ ನಿಂತು ಗೌರವಯುತ ಬದುಕಿಗೆ ಮಾರ್ಗದರ್ಶನ ನೀಡುತ್ತದೆ. ಸ್ವ-ಸಹಾಯ ಸಂಘಗಳು ಕೇವಲ ಆರ್ಥಿಕ ವ್ಯವಹಾರಗಳ ವೇದಿಕೆಗಳಲ್ಲ. ಮಹಿಳೆಯರು ವಾರದ ಸಭೆಗಳಲ್ಲಿ ತಮ್ಮ ಕಷ್ಟಸುಖ ಗಳನ್ನು ಹಂಚಿಕೊಳ್ಳುವುದರ ಜೊತೆಗೆ ಧರ್ಮ, ಸಮಾಜ, ಕುಟುಂಬ ಹಾಗೂ ಜೀವನ ಮೌಲ್ಯಗಳ ಕುರಿತು ಚರ್ಚಿಸುವ ಮೂಲಕ ಜ್ಞಾನವನ್ನು ಬೆಳೆಸಿಕೊಳ್ಳುತ್ತಿದ್ದಾರೆ. ಅದರಿಂದ ಮಹಿಳೆಯರಲ್ಲಿ ಸ್ವಾವಲಂಬನೆ ಹಾಗೂ ಆತ್ಮವಿಶ್ವಾಸ ಹೆಚ್ಚುತ್ತಿದೆಂದು ಹೇಳಿದರು.

ಶಾಸಕ ಹೆಚ್.ಕೆ.ಸುರೇಶ್ ಅವರು ಮಾತನಾಡಿ, ಡಾ.ಡಿ.ವೀರೇಂದ್ರ ಹೆಗ್ಗಡೆ ಅವರ ಮಾರ್ಗ ದರ್ಶನದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಶಿಕ್ಷಣ, ಆರೋಗ್ಯ, ಕೃಷಿ, ಮಹಿಳಾ ಸಬಲೀಕರಣ ಹಾಗು ಜಲಸಂರಕ್ಷಣೆ ಸೇರಿ ಹಲವು ಕ್ಷೇತ್ರಗಳಲ್ಲಿ ಸಮಾಜಮುಖಿ ಸೇವೆ ಸಲ್ಲಿಸುತ್ತಿದೆಂದರು.

ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಮೈಸೂರು ವಿಭಾಗೀಯ ಪ್ರಾದೇಶಿಕ ನಿರ್ದೇಶಕ ಯೋಗೀಶ್ ಅವರು ಮಾತನಾಡಿ, ತಾಲ್ಲೂಕಿನಲ್ಲಿ ಸುಮಾರು 8.5 ಎಕರೆ ವಿಸ್ತೀರ್ಣದ ಕೆರೆಯನ್ನು 10 ಲಕ್ಷಕ್ಕೂ ಅಧಿಕ ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗಿದೆ. ಕೆರೆಯ ಹೂಳೆತ್ತುವುದರಿಂದ ನೀರು ಸಂಗ್ರಹ ಸಾಮರ್ಥ್ಯ ಹೆಚ್ಚುವುದರ ಜೊತೆಗೆ ಅಂತರ್ಜಲ ಮಟ್ಟ ಸುಧಾರಣೆಗೆ ಸಹಕಾರಿಯಾಗಲಿದೆ ಎಂದರು.

ತಾಲ್ಲೂಕು ಯೋಜನಾಧಿಕಾರಿ ಮಂಜುಳಾ, ಕಂಡಾವರ ಗ್ರಾಮದ ಕೆ.ಎ.ಮಂಜುನಾಥಗೌಡ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ವೆಂಕಟೇಶ್, ಜಿಲ್ಲಾ ಜನಜಾಗೃತಿ ವೇದಿಕೆ ಉಪಾಧ್ಯಕ್ಷ ಎಸ್.ಕೆ.ನಾಗೇಶ್, ಪಿಡಿಓ ಅರುಣ್ ಉಪಸ್ಥಿತರಿದ್ದರು.

### ಸೆ.7 ರಂದು ಹೆಚ್.ಜಿ.ಗೋವಿಂದೇಗೌಡ ಶತಮಾನೋತ್ಸವ

» ಮೊದಲನೇ ಪುಟದಿಂದ

ಜೆ.ಆರ್.ಕೆಂಚೇಗೌಡ ಅವರು ಅಧ್ಯಕ್ಷತೆ ವಹಿಸಲಿದ್ದು, ಗೋವಿಂದೇಗೌಡರ ಪುತ್ರ ಹೆಚ್.ಜಿ.ವೆಂಕಟೇಶ್ ಅವರಿಗೆ ಗೌರವ ಸಮರ್ಪಣೆ ಇದ್ದು, ಸಂಸ್ಕೃತಿ ಚಿಂತಕ ಸುಧೀರ್ ಕುಮಾರ್ ಮುರೊಳ್ಳಿ ವಿಶೇಷ ಉಪನ್ಯಾಸ ನೀಡಲಿದ್ದಾರೆಂದರು.

ಕೆಯೂಡಬ್ಲ್ಯೂಜೆ ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಕೆ.ಪಿ.ಎಸ್.ಪ್ರಮೋದ್, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಬಿ.ಪಿ.ಕೃಷ್ಣೇಗೌಡ, ಜಿಲ್ಲಾ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಕೃಷ್ಣಮೂರ್ತಿ, ಜಿಲ್ಲಾ ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಸವರಾಜ್ ಹಾಗೂ ಹಾಸನ ಜಿಲ್ಲಾ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಮಾಜಿ ಅಧ್ಯಕ್ಷರಾದ ಚೈತ್ರ ಮಂಜೇಗೌಡ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ ಎಂದರು. ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಕೆ.ಪಿ.ಎಸ್. ಪ್ರಮೋದ್, ಉಪಾಧ್ಯಕ್ಷ ಜಿ.ಪ್ರಕಾಶ್, ಪ್ರಧಾನ ಕಾರ್ಯದರ್ಶಿ ಕೆ.ಜಿ.ಸುರೇಶ್, ಕಾರ್ಯದರ್ಶಿಗಳಾದ ಬಿ.ಆರ್. ಬೊಮ್ಮೇಗೌಡ, ಕೆ.ಎಂ.ಹರೀಶ್, ಖುಷ್ವಂತ್, ಸಿ.ಆರ್.ನವೀನ್ ಇದ್ದರು.

### ಅರಣ್ಯ ಇಲಾಖೆ, ಸೆಸ್ಕಾಂ ನಿರ್ಲಕ್ಷ್ಯ: ಕಾಡಾನೆ ಸಾವು

» ಮೊದಲನೇ ಪುಟದಿಂದ

ರೆಡಿಯೋ ಕಾಲರ್ ಅಳವಡಿಸಲು ಡಾಟ್ ಮಾಡಿದ ನಂತರ ಅಡ್ಡಪರಿಣಾಮ ಆಗಿ ಎಷ್ಟೋ ಹೆಣ್ಣಾನೆಗಳಿಗೆ ಗರ್ಭಪಾತ ಆಗುತ್ತಿದೆ. ಕೆಲವು ಸಾಯುತ್ತಿವೆ. ರೆಡಿಯೋ ಕಾಲರ್ ಸಹ ಕಳಪೆ ಆಗಿ ಬಿದ್ದು ಹೋಗುತ್ತಿವೆ. ಆದರೂ ಆನೆಗಳಿಗೆ ಹಿಂಸೆ ನೀಡಲಾಗುತ್ತಿದೆ. ಆನೆಗಳ ಕಾರಿಡಾರ್‌ಗೆ ಅಡ್ಡ ಇರುವುದನ್ನು ತೆರವು ಮಾಡಿ ಎಂದು ಸುಪ್ರೀಂಕೋರ್ಟ್ ಆದೇಶವಿದ್ದರೂ ಅದರ ಬಗ್ಗೆ ಯಾರೂ ಗಮನ ಹರಿಸುತ್ತಿಲ್ಲ. ಆನೆಗಳು ಒಂದು ಕಡೆಯಿಂದ ಮತ್ತೊಂದು ಕಡೆಗೆ ಹೋಗಲು ರೈಲ್ವೆ ಬ್ಯಾರಿಕೇಡ್ ಅಳವಡಿಸಿರುವುದನ್ನು ತೆಗೆಯಬೇಕೆಂದು ಒತ್ತಾಯಿಸಿದರು. ಸರ್ಕಾರ ಗಮನ ಹರಿಸಿ ಆನೆ ಮತ್ತು ಮನುಷ್ಯರ ಜೀವಹಾನಿ ತಪ್ಪಿಸಬೇಕೆಂದು ಮನವಿ ಮಾಡಿದರು.

### ಬರದ ನಾಡಿಗೆ ನೀರಾವರಿ ಸೌಲಭ್ಯ ತರಲು ಹೋರಾಟ

» ಮೊದಲನೇ ಪುಟದಿಂದ

ಜನರು ಶ್ರೀಕೃಷ್ಣನ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳ ಬೇಕೆಂದು ಕರೆ ನೀಡಿದರು.

ತಹಶೀಲ್ದಾರ್ ಸಂತೋಷ್ ಕುಮಾರ್ ಅವರು ಮಾತನಾಡಿ, ರಾಮಾಯಣ, ಮಹಾಭಾರತ ಹಾಗು ಭಗವದ್ಗೀತೆ ಭಾರತೀಯ ಸನಾತನ ಸಂಸ್ಕೃತಿ ಮತ್ತು ಪರಂಪರೆಯ ಜೀವಾಳವಾಗಿವೆ. ಮಾನವೀಯ ಮೌಲ್ಯಗಳ ಉನ್ನತ ಪರಂಪರೆಯನ್ನು ಹೊಂದಿರುವ ಭಾರತದಲ್ಲಿ ಅನೇಕ ಸಾಧುಸಂತರು ಹಾಗೂ ಮಹಾಪುರುಷರು ಜನಿಸಿ ದೇಶದ ಸಾಂಸ್ಕೃತಿಕ ಶ್ರೀಮಂತಿಕೆಗೆ ಕೊಡುಗೆ ನೀಡಿದ್ದಾರೆ ಎಂದರು. ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಸಮಾಜದ ಬಂಧುಗಳನ್ನು ಸನ್ಮಾನಿಸಿ ಗೌರವಿಸಲಾಯಿತು.

ತಾಲ್ಲೂಕು ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಧರ್ಮಶೇಖರ್, ನಗರಸಭೆ ಮಾಜಿ ಅಧ್ಯಕ್ಷ ಎಂ.ಸಮೀವುಲ್ಲಾ, ಅಮ್ಮನಹಟ್ಟಿ ಹರೀಶ್, ಜಿ.ಡಿ.ಪ್ರಭುದೇವ್ ಇದ್ದರು.

ಕಾರ್ಯಕ್ರಮಕ್ಕೂ ಮುನ್ನ ನಗರದಲ್ಲಿ ಕಾಡುಗೊಲ್ಲ ಸಂಘದ ಯುವ ಸಮುದಾಯದ ವತಿಯಿಂದ ಶಿಸ್ತುಬದ್ಧವಾಗಿ ಆಯೋಜಿಸಿದ್ದ ಬೈಕ್ ರ್‍ಯಾಲಿಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ ಅವರು ಪಾಲ್ಗೊಂಡಿದ್ದರು. ಕಾಡುಗೊಲ್ಲ ಸಂಘದ ಮುಖಂಡರು, ಪದಾಧಿಕಾರಿಗಳು ಭಾಗವಹಿಸಿದ್ದರು.

## ಶ್ರೀ ಸಂಕಷ್ಟಹರ ಗಣಪತಿ ದೇವಾಲಯ ಲೋಕಾರ್ಪಣೆ

• ಪ್ರಜೋದಯ ವರದಿ

**ಹಾಸನ:** ನಗರದ ವಿನಾಯಕ ನಗರದಲ್ಲಿರುವ ಪಿ ಎಂಡ್ ಟಿ ಕಾಲೋನಿಯಲ್ಲಿ ನಿರ್ಮಿಸಿರುವ ಸಪರಿವಾರ ಸಮೇತ ಶ್ರೀ ಸಂಕಷ್ಟಹರ ಗಣಪತಿ ನವೀಕೃತ ದೇವಸ್ಥಾನದ ಲೋಕಾರ್ಪಣೆ ಹಾಗು ನೂತನ ಬಿಂಬ ಅಷ್ಟಬಂದ ಪ್ರತಿಷ್ಟಾಪನಾ ಮಹೋತ್ಸವ ಕಾರ್ಯಕ್ರಮವು ಸೆ.5 ಮತ್ತು 6 ರಂದು ನಡೆಯಲಿದೆ.

ಈ ಎರಡು ದಿನಗಳು ಮಹಾಗಣಪತಿ ಪೂಜೆ, ಕೌಟುಕ ಬಂಧನ, ಪೂಜಾಂಗ ಪ್ರತಿಷ್ಠಾಂಗ ಹೋಮ ಇನ್ನಿತರ ವಿವಿಧ ಪೂಜಾ ಕೈಕಾರ್ಯಗಳು ನಡೆಯಲಿವೆ.

## ಖಬರ್‌ಸ್ಥಾನಕ್ಕೆ ನೀಡಿದ ಜಾಗ ರದ್ದು: ಅಸಮಾಧಾನ

• ಪ್ರಜೋದಯ ವರದಿ

**ಹಾಸನ:** ನಗರದ 80 ಅಡಿ ರಿಂಗ್ ರಸ್ತೆಯಲ್ಲಿ ಮುಸ್ಲಿಂ ಸಮುದಾಯಕ್ಕೆ ಸೇರಿದ ಖಬರ್‌ಸ್ಥಾನ ಜಾಗವನ್ನು ರಸ್ತೆ ವಿಸ್ತರಣೆ ಉದ್ದೇಶದಿಂದ ಸ್ವಾಧೀನ ಪಡಿಸಿಕೊಂಡು, ಬೇರೆಡೆ ಬದಲಿ ಜಾಗ ನೀಡಿದ್ದನ್ನು ಈಗ ರದ್ದುಪಡಿಸಲಾಗಿದೆ ಎಂದು ಕರ್ನಾಟಕ ರಾಜ್ಯ ಅಲ್ಪ ಸಂಖ್ಯಾತ ಮುಸ್ಲಿಂ ಧಾರ್ಮಿಕ ಆಸ್ತಿ ಹಿತರಕ್ಷಣಾ ವೇದಿಕೆ ರಾಜ್ಯ ಪ್ರಧಾನ ಕಾರ್ಯದರ್ಶಿ ಸಮೀರ್ ಅಹಮದ್ ಅವರು ಆರೋಪಿಸಿದರು.

ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಖಬರ್‌ಸ್ಥಾನ್ ನಮ್ಮ ಸಮುದಾಯಕ್ಕೆ ಅನೇಕ ರೀತಿಯಲ್ಲಿ ಉಪಯೋಗವಾಗುತ್ತಿತ್ತು. ಐದಾರು ಎಕರೆ ಪ್ರದೇಶವನ್ನು ಜಿಲ್ಲಾಡಳಿತ ಸ್ವಾಧೀನಪಡಿಸಿಕೊಂಡಿದೆ. ನಮಗೆ ಬದಲಿ ಜಾಗ ಕೊಡಬೇಕೆಂದು ಸಮುದಾಯದ ಸಂಘಟನೆಗಳು, ಜನಪರ ಸಂಘಟನೆಗಳು ಸೇರಿ ಹಲವು ರೀತಿಯ ಪ್ರತಿಭಟನೆ ಮಾಡಿದ್ದೇವು. ಇದಾದ ಬಳಿಕ ಜಿಲ್ಲಾಡಳಿತ ನಾವು ಕೇಳಿದ ಐದು ಎಕರೆ ಬದಲಾಗಿ ಕೇವಲ ಒಂದು ಎಕರೆ ಮಂಜೂರು ಮಾಡಿದ್ದರು ಎಂದು ದೂರಿದರು.

2020ರಲ್ಲಿ ಯಾವುದೇ ಮುನ್ಸೂಚನೆ ನೀಡದೆ ಖಬರ್‌ಸ್ಥಾನದ ಹೆಸರಿಗೆ ಮಂಜೂರು ಮಾಡ ಲಾಗಿದ್ದ ಜಾಗವನ್ನು ಜಿಲ್ಲಾಧಿಕಾರಿ ಅವರು ರದ್ದುಪಡಿಸಿದ್ದಾರೆ. ಅದರಿಂದ ನಮ್ಮ ಸಮಾಜಕ್ಕೆ ಅನ್ಯಾಯವಾಗಿದೆ. ಜಮೀನು ಮಂಜೂರು ಮಾಡಿ, ನಂತರ ರದ್ದು ಪಡಿಸಿರುವುದನ್ನು ಮರು ಪರಿಶೀಲನೆ ಮಾಡಬೇಕು. ಜಾಗವನ್ನು ಮತ್ತೆ ಮಂಜೂರು ಮಾಡಬೇಕು. ಇಲ್ಲದಿದ್ದರೆ ಹಿಂದಿನ ಹೋರಾಟಗಳು ಮರುಕಳಿಸಬಹುದೆಂದು ಎಚ್ಚರಿಕೆ ನೀಡಿದರು.

ರಾಜ್ಯ ಉಪಾಧ್ಯಕ್ಷ ರೆಹಮಾನ್ ಖಾನ್, ಸಂಚಾಲಕ ಮೊಹಮ್ಮದ್ ಸಿದ್ದೀಕ್ ಅನ್ಸಾರಿ, ತೌಫಿಕ್ ಪಾಷ ಇದ್ದರು.

### ತಂತ್ರಜ್ಞಾನ ಬಳಕೆಯಿಂದ ವಿದ್ಯಾರ್ಥಿಗಳ ಜ್ಞಾನ ವೃದ್ಧಿ। ಡಾ.ಎಸ್.ಮಂಜುನಾಥ

## ಡಿಜಿಟಲ್ ಗ್ರಂಥಾಲಯದಿಂದ ಜ್ಞಾನಾರ್ಜನೆಗೆ ಹೆಚ್ಚಿನ ಅವಕಾಶ

• ಪ್ರಜೋದಯ ವರದಿ

**ಹಾಸನ:** ಮುದ್ರಣ ರೂಪದಲ್ಲಿದ್ದ ಪುಸ್ತಕಗಳು ಪ್ರಸ್ತುತ ಡಿಜಿಟಲ್ ರೂಪದಲ್ಲಿಯೂ ಲಭ್ಯ ವಾಗುತ್ತಿರುವುದು ಪುಸ್ತಕ ಓದುಗರು ಹಾಗು ವಿದ್ಯಾರ್ಥಿಗಳಿಗೆ ಅಗತ್ಯ ಮಾಹಿತಿ ಪಡೆದುಕೊಳ್ಳಲು ಹೆಚ್ಚಿನ ಸಹಕಾರಿಯಾಗಿದೆ ಎಂದು ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಗ್ರಂಥಪಾಲಕ ಡಾ. ಎಸ್.ಮಂಜುನಾಥ ಅವರು ಹೇಳಿದರು.



ನಗರದ ಆರ್.ಸಿ.ರಸ್ತೆಯ ಗಂಧದ ಕೋಠಿ ಆವರಣದಲ್ಲಿರುವ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಗ್ರಂಥಾಲಯ ಮತ್ತು ಮಾಹಿತಿ ವಿಭಾಗದ ವತಿಯಿಂದ ಶುಕ್ರವಾರ ಆಯೋಜಿಸಿದ್ದ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಗ್ರಂಥಾಲಯಗಳು ಹಾಗು ಪುಸ್ತಕಗಳು ಡಿಜಿಟಲ್ ರೂಪಕ್ಕೆ ಪರಿವರ್ತನೆಯಾಗುತ್ತಿರುವುದರಿಂದ ಪ್ರತಿಯೊಬ್ಬರೂ ತಮ್ಮ ಕೈಯಲ್ಲಿರುವ ಮೊಬೈಲ್ ಅಥವಾ ಕಂಪ್ಯೂಟರ್ ಮೂಲಕ ಅಗತ್ಯ ಮಾಹಿತಿಯನ್ನು ಕ್ಷಣಾರ್ಧದಲ್ಲಿ ಪಡೆದು ಕೊಳ್ಳಬಹುದಾಗಿದೆ. ಮಾಹಿತಿ ತಂತ್ರಜ್ಞಾನ ಕ್ಷೇತ್ರವು ದಿನದಿಂದ ದಿನಕ್ಕೆ ವಿಸ್ತಾರ ಗೊಳ್ಳುತ್ತಿದ್ದು, ಅದರ ಸಮರ್ಪಕ ಬಳಕೆಯಿಂದ ವಿದ್ಯಾರ್ಥಿಗಳು ತಮ್ಮ ಜ್ಞಾನ ಹೆಚ್ಚಿಸಿಕೊಳ್ಳಬೇಕೆಂದು ಸಲಹೆ ನೀಡಿದರು.

ವಿಶ್ವದಾದ್ಯಂತ ನಡೆಯುತ್ತಿರುವ ಸಂಶೋಧನೆಗಳು ಹಾಗು ವಿವಿಧ ವಿಷಯಗಳ ಕುರಿತು ತಜ್ಞರು ಮಂಡಿಸುವ ಪ್ರಬಂಧಗಳು ಮತ್ತು ಸಂಶೋಧನಾ ವರದಿಗಳು ಅಂತರ್ಜಾಲದಲ್ಲಿ ಲಭ್ಯವಿವೆ. ಇವು ಅಧ್ಯಾಪಕರ ಸಂಶೋಧನಾ ಚಟುವಟಿಕೆಗಳಿಗೆ ಹಾಗೂ ವಿದ್ಯಾರ್ಥಿಗಳ ಅಧ್ಯಯನಕ್ಕೆ ಪೂರಕವಾಗಿವೆ. ಕಾಲೇಜಿನ ಗ್ರಂಥಾಲ ಯಕ್ಕೆ ಮಾತ್ರ ಸೀಮಿತವಾಗದೆ, ಮನೆಯಲ್ಲಿಯೇ ಕುಳಿತು ತಾವು ಅಧ್ಯಯನ ಮಾಡುತ್ತಿರುವ ವಿಷಯ ಗಳಿಗೆ ಸಂಬಂಧಿಸಿದ ಮಾಹಿತಿಯನ್ನು ಪಡೆದುಕೊಳ್ಳುವ ಅವಕಾಶವನ್ನು ಡಿಜಿಟಲ್ ತಂತ್ರಜ್ಞಾನ ಕಲ್ಪಿಸಿದೆ ಎಂದರು.

ಅಧ್ಯಾಪಕರು ತಂತ್ರಜ್ಞಾನವನ್ನು ಪರಿಣಾಮಕಾರಿಯಾಗಿ ಬಳಸಿ ಕೊಂಡು ವಿದ್ಯಾರ್ಥಿಗಳಿಗೆ ಮಾರ್ಗದ ರ್ಶನ ನೀಡಬೇಕು. ಉನ್ನತ ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿಗಳು ತಂತ್ರಜ್ಞಾನವನ್ನು ಸದುಪಯೋಗ ಪಡಿಸಿಕೊಂಡು ಹೆಚ್ಚಿನ ಜ್ಞಾನ ಸಂಪಾದಿಸಿದರೆ ಸಮಾಜದಲ್ಲಿ ಉತ್ತಮ ಸ್ಥಾನ ಗಳಿಸಲು ಸಾಧ್ಯವಾಗುತ್ತದೆಂದು ಹೇಳಿದರು.

ಪ್ರಾಂಶುಪಾಲ ಡಿ.ಕೆ.ಮಂಜಯ್ಯ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಹಿಂದೆ ಅಗತ್ಯ ಸೌಲಭ್ಯಗಳ ಕೊರತೆಯ ನಡುವೆಯೂ ಅನೇಕರು ಪರಿಶ್ರಮದಿಂದ ಅಧ್ಯಯನ ಮಾಡಿ ಉನ್ನತ ಸಾಧನೆ ಮಾಡಿದ್ದಾರೆ. ಕಂಪ್ಯೂಟರ್ ಹಾಗೂ ಇಂದಿನಷ್ಟು ತಾಂತ್ರಿಕ ಸೌಲಭ್ಯಗಳು ಇಲ್ಲದ ಕಾಲದಲ್ಲಿಯೂ ಲಿಖಿತ ರೂಪದಲ್ಲಿ ಅರ್ಜಿ ಸಲ್ಲಿಸಿ ವಿವಿಧ ಹುದ್ದೆಗಳನ್ನು ಪಡೆದುಕೊಂಡವರು ಅನೇಕರಿದ್ದಾರೆ ಎಂದರು.

ಇಂದು ಜಗತ್ತು ಸಂಪೂರ್ಣವಾಗಿ ಬದಲಾಗಿದ್ದು, ಮೊಬೈಲ್ ಮೂಲಕ ಜ್ಞಾನಾರ್ಜನೆಯಿಂದ ಹಿಡಿದು ಅಗತ್ಯ ವಸ್ತುಗಳ ಖರೀದಿವರೆಗೆ ಹಲವು ಕಾರ್ಯಗಳನ್ನು ಸುಲಭವಾಗಿ ಮಾಡಬಹುದಾಗಿದೆ. ಹೀಗಾಗಿ ವಿದ್ಯಾರ್ಥಿಗಳು ತಮ್ಮ ಕೈಯಲ್ಲಿರುವ ಮೊಬೈಲ್‌ಗಳನ್ನು ಅನಗತ್ಯ ಚಟುವಟಿಕೆಗಳಿಗೆ ಬಳಸದೆ, ವಿದ್ಯಾಭ್ಯಾಸ ಹಾಗೂ ಜ್ಞಾನಾರ್ಜನೆಗೆ ಸದುಪಯೋಗಪಡಿಸಿಕೊಳ್ಳಬೇಕು. ಸರ್ಕಾರ ವಿವಿಧ ಇಲಾಖೆಗಳ ಹುದ್ದೆಗಳ ಭರ್ತಿಗೆ ಅರ್ಜಿ ಆಹ್ವಾನಿಸುತ್ತಿದ್ದು, ಯುವಕರು ತಮ್ಮ ವಿದ್ಯಾರ್ಹತೆಗೆ ಅನುಗುಣವಾಗಿ ಅರ್ಹ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ ಸರ್ಕಾರಿ ಉದ್ಯೋಗ ಪಡೆಯುವ ನಿಟ್ಟಿನಲ್ಲಿ ಪ್ರಯತ್ನಿಸಬೇಕೆಂದು ಸಲಹೆ ನೀಡಿದರು.

ಗ್ರಂಥಾಲಯ ಮತ್ತು ಮಾಹಿತಿ ವಿಭಾಗದ ಮುಖ್ಯಸ್ಥ ಡಾ.ಮರಿರಾಜ ವಾಸುದೇವ ಸೇಡಂ, ಐ.ಕ್ಯೂ.ಎ.ಸಿ. ಘಟಕದ ಸಂಚಾಲಕ ಡಾ.ಕಾಂತೇಶ್ ಸಣ್ಣಿಂಗಮ್ಮನವರ, ಅಧ್ಯಾಪಕರಾದ ಜಿ.ಆರ್.ಮೋಹನ್‌ಕುಮಾರ್, ನಂದನ್, ಸುರೇಶ್ ಕುಮಾರ್, ಉಪನ್ಯಾಸಕ ಹೆಚ್.ಕೆ.ದಿಲೀಪ್ ಕುಮಾರ್ ಇತರರು ಉಪಸ್ಥಿತರಿದ್ದರು.

## ಕೊಳಲು ಗೋಪಾಲಕೃಷ್ಣ ಸ್ವಾಮಿ ವಿಶೇಷ ಪೂಜೆ

• ಪ್ರಜೋದಯ ವರದಿ

**ಕೊಣನೂರು:** ಶ್ರೀ ಕೊಳಲು ಗೋಪಾಲ ಕೃಷ್ಣ ಸ್ವಾಮಿ ದೇವಾಲಯದಲ್ಲಿ ಶ್ರೀಕೃಷ್ಣ ಜನ್ಮಾಷ್ಟಮಿಯ ಅಂಗವಾಗಿ ವಿವಿಧ ಪೂಜಾ ಕೈಂಕರ್ಯಗಳನ್ನು ನೆರವೇರಿಸಲಾಯಿತು. ಜನ್ಮಾಷ್ಟಮಿ ಅಂಗವಾಗಿ ದೇವಾಲಯವನ್ನು ತಳಿರು-ತೋರಣ ಹಾಗು ವಿವಿಧ ಬಗೆಯ ಹೂವುಗಳಿಂದ ಆಕರ್ಷಕವಾಗಿ ಅಲಂಕರಿಸಲಾಗಿತ್ತು. ಮೂಲವಿಗ್ರಹಕ್ಕೆ ಪಂಚವರ್ಣದ ವಿಶೇಷ ಅಲಂಕಾರ ಮಾಡಲಾಗಿತ್ತು.



ಬೆಳಿಗ್ಗೆ ವಿಶ್ವಕ್ಸೇನಾರಾಧನೆ, ಪುಣ್ಯಾಹ ವಾಚನ, ಕಂಕಣಧಾರಣೆ, ಪಂಚಾಮೃತ ಅಭಿಷೇಕ, ಅಂಬೆಗಾಲು ಕೃಷ್ಣನಿಗೆ ತೊಟ್ಟಿಲು ಸೇವೆ, ಅಷ್ಟಾವಧಾನ ಸೇವೆ, ಅಷ್ಟೋತ್ತರ ಸೇವೆ, ಮಹಾ ನೈವೇದ್ಯ ಹಾಗು ಮಹಾಮಂಗಳಾರತಿ ಸೇರಿ ವಿವಿಧ ಪೂಜಾ ಕೈಂಕರ್ಯಗಳನ್ನು ನೆರವೇರಿಸಲಾ ಯಿತು. ಹೂವುಗಳಿಂದ ವಿಶೇಷವಾಗಿ ಅಲಂಕರಿಸಲಾಗಿದ್ದ ಉತ್ಸವಮೂರ್ತಿಗೂ ವಿಶೇಷ ಪೂಜೆ ಸಲ್ಲಿಸಲಾಯಿತು. ಅರ್ಚಕರಾದ ಶ್ರೀಧರ್, ನಾರಾಯಣ್ ಹಾಗು ಲಿಖಿತ್ ವೈಷ್ಣವ್ ಅವರು ಪೂಜಾ ಕೈಂಕರ್ಯಗಳನ್ನು ನೆರವೇರಿಸಿದರು. ಮಹಾಮಂಗಳಾರತಿ ಬಳಿಕ ಭಕ್ತರಿಗೆ ಪ್ರಸಾದ ವಿತರಿಸಲಾಯಿತು.

## ಮನೆ ಬಳಿ ಗಾಂಜಾ ಗಿಡ ಬೆಳೆಸಿದ್ದ ವ್ಯಕ್ತಿ ಬಂಧನ

**ಆಲೂರು:** ಮನೆಯ ಹಿಂಭಾಗದಲ್ಲಿ ಗಾಂಜಾ ಗಿಡಗಳನ್ನು ಬೆಳೆಸಿದ್ದ ಆರೋಪಿ ಯನ್ನು ಪೊಲೀಸರು ಬಂಧಿಸಿ, 7 ಕೆ.ಜಿ. 200 ಗ್ರಾಂ ಗಾಂಜಾ ಸೊಪ್ಪನ್ನು ವಶಪಡಿಸಿಕೊಂಡಿರುವ ಘಟನೆ ತಾಲ್ಲೂಕಿನ ಕುಂದೂರು ಹೋಬಳಿಯ ನಲ್ಲಿಗೆರೆ ಗ್ರಾಮದಲ್ಲಿ ಶುಕ್ರವಾರ ನಡೆದಿದೆ. ಪ್ರದೀಪ್ ಬಂಧಿತ ಆರೋಪಿ. ಪ್ರದೀಪ್ ತಮ್ಮ ವಾಸದ ಮನೆಯ ಹಿಂಭಾಗದಲ್ಲಿ ಐದು ಗಾಂಜಾ ಗಿಡಗಳನ್ನು ಬೆಳೆಸಿರುವ ಬಗ್ಗೆ ಖಚಿತ ಮಾಹಿತಿ ಮೇರೆಗೆ ತಹಶೀಲ್ದಾರ್ ಹಾಗು ಪೊಲೀಸರು ದಾಳಿ ನಡೆಸಿ ಪರಿಶೀಲಿಸಿ, ಗಾಂಜಾ ಗಿಡಗಳು ಪತ್ತೆಯಾದ ಹಿನ್ನಲೆ ಆರೋಪಿಯನ್ನು ವಶಕ್ಕೆ ಪಡೆದಿದ್ದಾರೆ. ಕಾರ್ಯಾಚರಣೆಯಲ್ಲಿ ತಹಶೀಲ್ದಾರ್ ಮಲ್ಲಿಕಾರ್ಜುನ್, ರಾಜಸ್ವ ನಿರೀಕ್ಷಕ ಸಂತೋಷ್ ಹಾಗು ಪೊಲೀಸ್ ಇನ್ಸ್‌ಪೆಕ್ಟರ್ ಮೋಹನ್ ರೆಡ್ಡಿ ಭಾಗವಹಿಸಿದ್ದರು.




ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019

CMYK CMYK CMYK CMYK